26 December 2025 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಒಳ್ಳೆಯ ಸಮಯ ಬರುವವರೆಗೂ,
ತಾತ್ಕಾಲಿಕವಾಗಿ
ಕೆಟ್ಟ ಸಮಯವನ್ನು ತಡೆದುಕೊಳ್ಳಲೇ
ಬೇಕು!
-ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ಜೀವನದಲ್ಲಿ ನಮಗೆ
ಅರ್ಥ ಮಾಡಿಸುವವರು
ಸಿಗುತ್ತಾರೆ ವಿನಃ ನಮ್ಮನ್ನು
ಅರ್ಥ ಮಾಡಿಕೊಳ್ಳುವವರು
ಸಿಗುವುದು ತುಂಬಾ
ವಿರಳ.....
ಮೈಲಾರ ಸಾವಿತ್ರಿಬಾಯಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 61 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ಭೀಕರ ಅಪಘಾತ: 6 ಮಂದಿ ಸಜೀವ ದಹನ

## ಖಾಸಗಿ ಬಸ್‌ಗೆ ವಿರುದ್ಧ ದಿಕ್ಕಿನಿಂದ ಬಂದು ಡಿಕ್ಕಿ ಹೊಡೆದ ಲಾರಿ | ಹೊತ್ತಿ ಉರಿದ ಸ್ಲೀಪರ್ ಬಸ್ | ಮಧ್ಯರಾತ್ರಿ ಸವಿನಿದ್ದೆಯಲ್ಲಿದ್ದವರು ದಹನ | ಸೀಬರ್ಡ್ ಬಸ್‌ನಲ್ಲಿದ್ದ ಐವರು, ಲಾರಿ ಚಾಲಕ ಸಾವು

**ಚಿತ್ರದುರ್ಗ:** ಹಿರಿಯೂರು ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿಯ ಗೊರ್ಲತ್ತು ಕ್ರಾಸ್ ಬಳಿ ಮಧ್ಯ ರಾತ್ರಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಖಾಸಗಿ ಸ್ಲೀಪರ್ ಕೋಚ್ ಬಸ್ ಹೊತ್ತಿ ಉರಿದು 6 ಮಂದಿ ಪ್ರಯಾಣಿಕರು ಸಜೀವ ದಹನವಾಗಿದ್ದಾರೆ.

ಬೆಂಗಳೂರಿನಿಂದ ಗೋಕರ್ಣಕ್ಕೆ ಹೋಗುತ್ತಿದ್ದ ಸೀಬರ್ಡ್ ಖಾಸಗಿ ಬಸ್‌ಗೆ ಕಂಟೇನರ್ ಲಾರಿ ರಸ್ತೆಯ ಬ್ಯಾರಿಕೇಡ್‌ಗಳನ್ನು ದಾಟಿ ಡಿಕ್ಕಿ ಹೊಡೆದಿದೆ. ಲಾರಿ ಡಿಕ್ಕಿ ಹೊಡೆದ ರಭಸಕ್ಕೆ ಬಸ್ ಡೀಸೆಲ್ ಟ್ಯಾಂಕ್ ಒಡೆದು ಬಸ್ ಹೊತ್ತು ಉರಿದಿದೆ. ಬಸ್‌ನಲ್ಲಿ 29 ಮಂದಿ ಪ್ರಯಾಣಿಕರಿದ್ದರು. ಇವರಲ್ಲಿ 5 ಮಂದಿ ಸಜೀವ ದಹನವಾಗಿದ್ದಾರೆ. ಅಲ್ಲದೆ, ಲಾರಿ ಡ್ರೈವರ್ ಸಹ ಸಾವನ್ನಪ್ಪಿದ್ದಾನೆ. ಬಸ್ಸಿನಲ್ಲಿ ಪ್ರಯಾಣಿಸುತ್ತಿದ್ದ ಹಲವರು ತೀವ್ರ ಗಾಯಗೊಂಡಿದ್ದಾರೆ. ಗಾಯಗೊಂಡವರನ್ನು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆ ಮತ್ತು ಶಿರಾ ಸರ್ಕಾರಿ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ.

ಅಪಘಾತದ ಸಂದರ್ಭದಲ್ಲಿ ಬೆಂಕಿಯಿಂದ ಹೊತ್ತಿ ಉರಿಯುತ್ತಿದ್ದ ಬಸ್‌ನ ಹಿಂದೆ ಇದ್ದ ದಾಂಡೇಲಿಗೆ ತೆರಳುತ್ತಿದ್ದ 42 ಶಾಲಾ ಮಕ್ಕಳಿದ್ದ ಮತ್ತೊಂದು ಬಸ್ಸಿಗೂ ಕೂಡ ಬೆಂಕಿ ಹತ್ತಿದೆ. ಶಾಲಾ ಬಸ್ ರಾಷ್ಟ್ರೀಯ ಹೆದ್ದಾರಿಯ ಬೇಲಿ ಯನ್ನು ಕಿತ್ತು ಚರಂಡಿ ದಾಟಿ ಆ ಕಡೆಗೆ ಹೋಗಿ ನಿಂತಿದೆ.

ಅದೃಷ್ಟವಶಾತ್, ಬಸ್ಸಿನಲ್ಲಿದ್ದ 42 ಮಕ್ಕಳಲ್ಲಿ ಒಬ್ಬರಿಗೂ ಯಾವುದೇ ಗಾಯಗಳಾಗಿಲ್ಲ. ಮಕ್ಕಳಿದ್ದ ಬಸ್ಸಿನ ಚಾಲಕ ಘಟನೆಗೆ ಪ್ರತ್ಯಕ್ಷ ಸಾಕ್ಷಿಯಾಗಿದ್ದಾರೆ. ಮೃತದೇಹಗಳನ್ನು ಗುರುತಿಸುವ ಕಾರ್ಯ ನಡೆಯುತ್ತಿದೆ. ಅಪಘಾತಕ್ಕೆ ಕಾರಣವೇನು ಮತ್ತು ಅದು

ಪುಟ 2ಕ್ಕೆ







## ಟ್ಯಾಂಕ್‌ಗೆ ಡಿಕ್ಕಿಯಿಂದ ಹೊತ್ತಿ ಉರಿದ ಬಸ್

**ಚಿತ್ರದುರ್ಗ:** ವಿರುದ್ಧ ದಿಕ್ಕಿನಲ್ಲಿ ಬಂದ ಟ್ರಕ್ ಬಸ್ಸಿನ ಡೀಸೆಲ್ ಟ್ಯಾಂಕ್‌ಗೆ ಗುದ್ದಿದ್ದರಿಂದ ಈ ದುರಂತ ಸಂಭವಿಸಿದೆ ಎಂದು ಸೀಬರ್ಡ್ ಬಸ್ ಮಾಲೀಕ ನಾಗರಾಜು ತಿಳಿಸಿದ್ದಾರೆ.

ಗೊರ್ಲತ್ತು ಗ್ರಾಮದ ಬಳಿ ಭೀಕರ ಅಪಘಾತ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಹಿತಿ ನೀಡಿದ ಅವರು, ಬೆಂಗಳೂರಿನಿಂದ ಗೋಕರ್ಣಕ್ಕೆ ಹೊರಟಿದ್ದ ಸ್ಲೀಪರ್ ಬಸ್ಸಿನಲ್ಲಿ 29 ಜನ ಪ್ರಯಾಣಿಸುತ್ತಿದ್ದರು. ಟ್ರಕ್ ವಿರುದ್ಧ ದಿಕ್ಕಿನಿಂದ ಬಂದು ಡೀಸೆಲ್ ಟ್ಯಾಂಕ್ ಬಳಿ ಗುದ್ದಿದೆ. ಗುದ್ದಿದ ರಭಸಕ್ಕೆ ಮೊದಲು ಟ್ರಕ್‌ಗೆ ಬೆಂಕಿ ಹೊತ್ತಿಕೊಂಡಿತು. ನಂತರ ಬಸ್ಸಿನಲ್ಲಿ ಬೆಂಕಿ ಕಾಣಿಸಿಕೊಂಡಿದೆ ಎಂದು ಹೇಳಿದರು.

ಪ್ರಯಾಣಿಕರ ಸುರಕ್ಷೆಗೆ ಸಂಬಂಧಿಸಿದ ಎಲ್ಲಾ ಮಾನದಂಡಗಳನ್ನು ಬಸ್ಸು ಹೊಂದಿತ್ತು. ಎರಡೂ ತುರ್ತು ನಿರ್ಗಮನ ದ್ವಾರವೂ ಇತ್ತು. 29 ಪ್ರಯಾಣಿಕರ ಪೈಕಿ 25 ಮಂದಿ ಗೋಕರ್ಣಕ್ಕೆ ಬುಕ್ ಮಾಡಿದರೆ 2 ಮಂದಿ ಶಿವಮೊಗ್ಗ, 2 ಮಂದಿ ಕುಮಟಾಕ್ಕೆ ಸೀಟ್ ಬುಕ್ ಮಾಡಿದ್ದರು ಎಂದು ಮಾಹಿತಿ ನೀಡಿದರು.

ಬಸ್ಸಿನ ಕ್ಲೀನರ್ ಸಾಧಿಕ್ ಪ್ರತಿಕ್ರಿಯಿಸಿ, ರಾತ್ರಿ 1:30ರಿಂದ 2 ಗಂಟೆಯ ನಡುವೆ ಈ ಅಪಘಾತ ಸಂಭವಿಸಿದೆ. ಡಿಕ್ಕಿ ಹೊಡೆದ ರಭಸಕ್ಕೆ ಮಲಗಿದ್ದ ಬಸ್‌ನಿಂದ ನಾನು

ಪುಟ 2ಕ್ಕೆ

## ತಾಯಿ ಮಗು ದಾರುಣ ಸಾವು

ಚಿತ್ರದುರ್ಗ: ಅಪಘಾತದಲ್ಲಿ ಬದುಕುಳಿದ ಒಬ್ಬೊಬ್ಬ ಪ್ರಯಾಣಿಕರ ಕತೆಯೂ ರೋಚಕವಾಗಿದೆ. ಒಂದೇ ಐಟಿ ಕಂಪನಿಯ 6 ಮಂದಿ ಸಹೋದ್ಯೋಗಿಗಳು ಬೆಂಕಿಯ ಕೆನ್ನಾಲಿಗೆಗೆ ನಡುವೆ ಸಿಲುಕಿ ಒದ್ದಾಡಿದ್ದಾರೆ. ಕವಿತಾರ ಮದುವೆ ನಿಗದಿಯಾಗಿರುವ ಹಿನ್ನೆಲೆ ಬ್ಯಾಚುಲರ್ ಪಾರ್ಟಿಗೆಂದು ಇವರು ಗೋಕರ್ಣಕ್ಕೆ ತೆರಳುತ್ತಿದ್ದರು. ಅಲ್ಲಿನ ಖಾಸಗಿ ರೆಸಾರ್ಟ್ ನಲ್ಲಿ ಪಾರ್ಟಿಯೂ ನಿಗದಿಯಾಗಿತ್ತು. ಕ್ರಿಸ್ಮಸ್ ರಜೆ ಹಿನ್ನೆಲೆ ತಂಡವೇ ಗೋಕರ್ಣಕ್ಕೆ ಹೊರಟಿತ್ತು. ಆ ಪೈಕಿ ಬಿಂದು ಮತ್ತು ಆಕೆಯ 5 ವರ್ಷದ ಮಗು ಗ್ರೇಯ ಅಪಘಾತದಲ್ಲಿ ಮೃತ ಪಟ್ಟಿದ್ದಾರೆ. ಗಾಯಾಳುಗಳಾದ ಶಶಾಂಕ್ ಮತ್ತು ಸಂಧ್ಯಾ ಅವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.



## ಲಾರಿ ಚಾಲಕ ಕಾರಣ: ಸಚಿವ ರಾಮಲಿಂಗಾರೆಡ್ಡಿ



**ಬೆಂಗಳೂರು:** ಚಿತ್ರದುರ್ಗದಲ್ಲಿ ನಡೆದ ಬಸ್ ಅಪಘಾತಕ್ಕೆ ಲಾರಿ ಚಾಲಕನ ರ್‍ಯಾಷ್ ಡ್ರೈವ್ ಹಾಗೂ ಅಜಾಗರೂಕತೆ ಕಾರಣ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ಚಿತ್ರದುರ್ಗ ಬಸ್ ದುರಂತದ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಗೋಕರ್ಣಕ್ಕೆ ಹೋಗುತ್ತಿದ್ದ ಸೀಬರ್ಡ್ ಬಸ್‌ಗೆ ಲಾರಿ ಡಿಕ್ಕಿಯಾಗಿ ಅವಘಡ ಸಂಭವಿಸಿದೆ.

ಪುಟ 2ಕ್ಕೆ

## ಮೈಸೂರು ಅರಮನೆ ಎದುರು ಸ್ಫೋಟ
## ಇಬ್ಬರ ದುರ್ಮರಣ
### ಬಲೂನ್‌ಗೆ ನೈಟ್ರೋಜನ್ ಗ್ಯಾಸ್ ತುಂಬಿಸುವಾಗ ಅವಘಡ

ಮೈಸೂರು: ಮೈಸೂರು ಅರಮನೆ ಮುಂಭಾಗ ಬಲೂನ್‌ಗಳಿಗೆ ನೈಟ್ರೋಜನ್ ಗ್ಯಾಸ್ ತುಂಬಿಸುವ ವೇಳೆ ಅಚಾನಕ್ ಸ್ಫೋಟ ಸಂಭವಿಸಿ ಇಬ್ಬರು ಸಾವನ್ನಪ್ಪಿರುವ ಘಟನೆ ನಡೆದಿದೆ. ಈ ಅವಘಡದಲ್ಲಿ ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಸ್ಫೋಟದ ತೀವ್ರತೆಗೆ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಗಾಯಾಳುಗಳನ್ನು ಸ್ಥಳೀಯರು ತಕ್ಷಣವೇ ಸಮೀಪದ ಕೆ.ಆರ್ ಆಸ್ಪತ್ರೆಗೆ ದಾಖಲಿಸಿದ್ದಾರೆ. ಸಾವನ್ನಪ್ಪಿದವರ ಗುರುತು ಪತ್ತೆ ಹಚ್ಚುವ ಕಾರ್ಯ ನಡೆಯುತ್ತಿದೆ. ಮಾಹಿತಿ ತಿಳಿದ ತಕ್ಷಣ ಕೃಷ್ಣರಾಜ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ನೈಟ್ರೋಜನ್ ಗ್ಯಾಸ್ ಸಿಲಿಂಡರ್ ಬಳಕೆ ವೇಳೆ ಸುರಕ್ಷತಾ ಕ್ರಮಗಳಲ್ಲಿ ಲೋಪವಿದೆಯೇ ಎಂಬುದರ ಕುರಿತು ತನಿಖೆ ಕೈಗೊಳ್ಳಲಾಗಿದೆ. ಘಟನೆಗೆ ನಿಖರ ಕಾರಣ ತಿಳಿಯಲು ಪೊಲೀಸರು ಮುಂದಿನ ತನಿಖೆ ಮುಂದುವರಿಸಿದ್ದಾರೆ.



## ಹುಲಿಗಳ ಸೆರೆಗೆ ನಾಲ್ಕು ವಿಶೇಷ ತಂಡಗಳ ರಚನೆ



**ಚಾಮರಾಜನಗರ:** ತಾಲ್ಲೂಕಿನ ನಂಜದೇವನಪುರ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಾಣಿಸಿಕೊಂಡಿರುವ ಐದು ಹುಲಿಗಳನ್ನು ಸೆರೆಹಿಡಿಯಲು ಅರಣ್ಯ ಇಲಾಖೆ ನಾಲ್ಕು ವಿಶೇಷ ತಂಡಗಳನ್ನು ರಚಿಸಿದೆ. ನಾಲ್ಕು ತಂಡಗಳನ್ನು ರಚಿಸಿ ಪ್ರತಿ ತಂಡಕ್ಕೆ, ಒಂದು ಡ್ರೋನ್ ವಿತರಿಸಿ ಹುಲಿ ಕಂಡುಬಂದ ಪ್ರದೇಶದ ಸುತ್ತಮುತ್ತಲೂ ನಿಗಾವಹಿಸಲಾಗಿದೆ. ಎರಡು ಸಾಕಾನೆಗಳನ್ನು ಬಳಸಿಕೊಂಡು ಹುಲಿಗಳನ್ನು ಸೆರೆ ಹಿಡಿಯುವ ಕಾರ್ಯಾಚರಣೆ ನಡೆಸಲಾಗುತ್ತಿದೆ.

ಹುಲಿಗಳ ಇರುವಿಕೆಯನ್ನು ಪತ್ತೆಹಚ್ಚಲು ಡ್ರೋನ್ ಮತ್ತು ಥರ್ಮಲ್ ಕ್ಯಾಮೆರಾಗಳನ್ನು ಬಳಸಲಾಗುತ್ತಿದೆ. ವಿವಿಧ ವಲಯಗಳಿಂದ ಅರಣ್ಯ ಸಿಬ್ಬಂದಿ ಕರೆಸಿಕೊಂಡು ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ. ಕೇಜ್ ಮತ್ತು ಹುಲಿ ಬೋನುಗಳನ್ನಿಟ್ಟಿರುವ ಸಿಬ್ಬಂದಿ ಹುಲಿ ಸೆರೆಗೆ ಕಾರ್ಯಾಚರಣೆ ಕೈಗೊಂಡಿದ್ದಾರೆ.

# ಗಣೇಶನ ಪೆಂಡೆಂಟ್ ನೋಡಿ ಪುತ್ರಿ ಮಾನಸಳ ಶವ ಗುರುತಿಸಿದ ತಂದೆ

**ಚಿತ್ರದುರ್ಗ:** ಹಿರಿಯೂರು ಬಳಿ ಸಂಭವಿಸಿದ ಬಸ್ ದುರಂತದಲ್ಲಿ ಕಣ್ಮರೆಯಾಗಿದ್ದ ಮಗಳನ್ನು ತಂದೆ ಶವಾಗಾರದಲ್ಲಿ ಪತ್ತೆಹಚ್ಚಿದ್ದಾರೆ. ಗಣೇಶನ ಪೆಂಡೆಂಟ್ ಇದ್ದ ಲಾಕೆಟ್ ಮೂಲಕ ತಮ್ಮ ಮಗಳು ಮಾನಸ ಅವ ರನ್ನು ತಂದೆ ಪತ್ತೆ ಮಾಡಿದರು.



ಹಿರಿಯೂರು ತಾಲೂಕಿನ ಗೊರ್ಲತ್ತು ಗ್ರಾಮದ ಬಳಿ ಲಾರಿ ಹಾಗೂ ಖಾಸಗಿ ಬಸ್ ನಡುವೆ ಅಪಘಾತ ಸಂಭವಿಸಿದೆ. ನವ್ಯಾ ಹಾಗೂ ಮಾನಸಾ ಶವಗಳ ಬಗ್ಗೆ ಅನುಮಾನ ವ್ಯಕ್ತವಾಗಿತ್ತು. ಶವಾಗಾರದಲ್ಲಿ ಮಾನಸಾ ತಂದೆ ಗಣೇಶನ ಪೆಂಡೆಂಟ್ ಇದ್ದ ಲಾಕೆಟ್ ಮೂಲಕ ಮಗಳ ಶವವನ್ನು ಪತ್ತೆಹಚ್ಚಿದ್ದಾರೆ.

ಪುಟ 2ಕ್ಕೆ

## ನವ್ಯಾಗೆ ಮದುವೆ ಫಿಕ್ಸ್ ಆಗಿತ್ತು

ಹಾಸನ ಜಿಲ್ಲೆ ಚನ್ನರಾಯಪಟ್ಟಣ ಮೂಲದ ಮಾನಸ ಬೆಂಗಳೂರು ಐಟಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ಮಾನಸ ಜೊತೆಗೆ ಇದ್ದ ನವ್ಯಾ, ಮಿಲನ ಸೇರಿ ಅಭಿಷೇಕ್ ಎಂಬವರ ಜೊತೆ ಗೋಕರ್ಣ ಪ್ರವಾಸಕ್ಕೆ ಹೊರಟಿದ್ದರು. ಮಾನಸಾಗೆ ಮದುವೆಯೂ ನಿಗದಿಯಾಗಿತ್ತು. ಅದಕ್ಕಾಗಿ ಆಭರಣವನ್ನೂ ಕುಟುಂಬ ಖರೀದಿಸಿತ್ತು. ಆದರೆ ವಿಧಿಯಾಟಕ್ಕೆ ಹಸೆಮಣೆ ಏರುವ ಮುನ್ನವೇ ಅವರು ಮಸಣ ಸೇರಿದ್ದಾರೆ. ನವ್ಯಾ ತಂದೆ ಮಂಜಪ್ಪ ಮಾತನಾಡಿ, ಇಂದು ಬೆಳಿಗ್ಗೆ 7 ಗಂಟೆಗೆ ಮಿಲನ ಫೋನ್ ಮಾಡಿ ಹೇಳಿದಳು. ನವ್ಯಾ, ಮಾನಸಾ,

ಪುಟ 2ಕ್ಕೆ

# 43 ಶಾಲಾ ಮಕ್ಕಳನ್ನು ರಕ್ಷಿಸಿದ ಚಾಲಕ

## ಅಪಘಾತ ಸ್ಥಳದಿಂದ ಕಂದಕಕ್ಕೆ ಬಸ್ ಇಳಿಸಿ ಪಾರು

**ಚಿತ್ರದುರ್ಗ:** ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿ ಬಳಿ ನಡೆದ ಭೀಕರ ರಸ್ತೆ ಅಪಘಾತದಲ್ಲಿ 43 ಶಾಲಾ ಮಕ್ಕಳು, ಮೂವರು ಶಿಕ್ಷಕರು ಆಶ್ಚರ್ಯಕರ ರೀತಿಯಲ್ಲಿ ಪಾರಾಗಿದ್ದಾರೆ.

ಬೆಂಗಳೂರು, ಟಿ.ದಾಸರಹಳ್ಳಿಯ ಶಾಲೆಯೊಂದರ ಮಕ್ಕಳು ಬಸ್ ನಲ್ಲಿ ದಾಂಡೇಲಿಗೆ ಪ್ರವಾಸ ಹೊರಟಿದ್ದರು. ಅಪಘಾತಕ್ಕೀಡಾದ ಸೀಬರ್ಡ್ ಬಸ್ ಹಿಂದೆಯೇ ಶಾಲಾ ಬಸ್ ಇತ್ತು. ಕಂಟೇನರ್ ಸೀಬರ್ಡ್ ಬಸ್‌ಗೆ ಡಿಕ್ಕಿ ಹೊಡೆದ ಕೂಡಲೇ ಶಾಲಾ ಬಸ್ ಚಾಲಕ ಬಸ್‌ಅನ್ನು ಪಕ್ಕದ ಕಂದಕಕ್ಕೆ ಇಳಿಸಿ ಎಡಕ್ಕಿದ್ದ ಸರ್ವೀಸ್ ರಸ್ತೆಗೆ ಬಸ್ ತಿರುಗಿಸುವಲ್ಲಿ ಯಶಸ್ವಿ ಆಗಿದ್ದಾರೆ. ಎಲ್ಲಾ ಮಕ್ಕಳು ಸಣ್ಣ ಗಾಯವೂ ಇಲ್ಲದಂತೆ ಅಪಾಯದಿಂದ ಪಾರಾದರು. ಚಾಲಕನ ಸಮಯಪ್ರಜ್ಞೆಯಿಂದ ಮಕ್ಕಳ ಪ್ರಾಣ ಉಳಿದಿದೆ. ಶಾಲಾ ಬಸ್ ಕಂದಕಕ್ಕೆ ಇಳಿದ ಕಾರಣ ಮುಂಬದಿ ಜಖಂಗೊಂಡಿದೆ. ತಕ್ಷಣ ಇಳಿದ ಶಾಲಾ ಬಸ್ ಚಾಲಕ ಸೀಬರ್ಡ್

ಪುಟ 2ಕ್ಕೆ



## ಮೂವರು ಗ್ರೇಟ್ ಎಸ್ಕೇಪ್

ಚಿತ್ರದುರ್ಗ: ಹಿರಿಯೂರು ಬಳಿ ಸಂಭವಿಸಿದ ಭೀಕರ ಬಸ್ ಅಪಘಾತದಲ್ಲಿ ಮೂವರು ಸ್ನೇಹಿತೆಯರು ಪವಾಡ ಸದೃಶ್ಯವಾಗಿ ಪಾರಾಗಿದ್ದಾರೆ.

ಪುಟ 2ಕ್ಕೆ

## ಕೈನಿಂದಲೇ ವೋಟ್ ಚೋರಿ!

ಬೆಂಗಳೂರು: ಬಿಜೆಪಿ ವಿರುದ್ಧ ಮತಗಳ್ಳತನ ಮಾಡಿದ್ದ ಕಾಂಗ್ರೆಸ್ ವಿರುದ್ಧವೇ ಇದೀಗ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ವೋಟ್ ಚೋರಿ ಆರೋಪ ಮಾಡಿದ್ದಾರೆ.

ಕಾಂಗ್ರೆಸ್ 10 ರಿಂದ 15 ಸಾವಿರ ಕಳ್ಳ ಮತದಾರರನ್ನ ಸೇರಿಸಿದ್ದಾರೆ. ಬೆಂಗಳೂರು ಎಲ್ಲಾ ಕ್ಷೇತ್ರಗಳಲ್ಲೂ ಕಳ್ಳ ಮತದಾರರನ್ನ ಸೇರಿಸಿದ್ದಾರೆ ಎಂದು ಬಿವೈ ವಿಜಯೇಂದ್ರ ಆರೋಪಿಸಿದ್ದಾರೆ. ಗುರುವಾರ ಮಾಧ್ಯಮಗಳ ಜೊತೆ ಮಾತನಾಡಿದ ಬಿವೈ ವಿಜಯೇಂದ್ರ, ಈ ಸರ್ಕಾರದ ಮೇಲೆ ಜನ ಶಾಪ ಹಾಕುತ್ತಿದ್ದಾರೆ. ಮುಂದೆ ಬಿಜೆಪಿ ಸ್ವಂತ ಶಕ್ತಿ ಮೇಲೆ ಗೆದ್ದು ಅಧಿಕಾರ ಹಿಡಿಯಲಿದೆ ಕಾಂಗ್ರೆಸ್ ನವರು ವೋಟ್ ಚೋರಿ ಆರೋಪ

## ಮೃತರಿಗೆ 5 ಲಕ್ಷ ಪರಿಹಾರ: ಸಿಎಂ

**ಬೆಂಗಳೂರು:** ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿ ಬಳಿ ನಡೆದ ರಸ್ತೆ ಮೃತಪಟ್ಟವರ ಕುಟುಂಬಗಳಿಗೆ ತಲಾ 5 ಲಕ್ಷ ಹಾಗೂ ಗಾಯಗೊಂಡವರಿಗೆ ತಲಾ ರೂ.50,000 ಪರಿಹಾರ ನೀಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅಪಘಾತದ ಬಗ್ಗೆ ತನಿಖೆ ನಡೆಸಲಾಗುವುದು. ಹಲವು ಪ್ರಯಾಣಿಕರು ಸಜೀವ ದಹನವಾದ ಘೋರ ದುರಂತದ ಸುದ್ದಿ ಕೇಳಿ ಎದೆ ನಡುಗಿತು. ಕ್ರಿಸ್ಮಸ್ ರಜೆಯಲ್ಲಿ ಊರಿಗೆ ತೆರಳುತ್ತಿದ್ದವರ ಪ್ರಯಾಣ ಈ ರೀತಿ ದುರಂತದಲ್ಲಿ ಕೊನೆಗೊಂಡಿರುವುದು ವಿಷಾದನೀಯ ಎಂದು ದುಃಖಿತರಾಗಿದ್ದಾರೆ. ಅಪಘಾತದ ಬಗ್ಗೆ ಸೂಕ್ತ ತನಿಖೆ ನಡೆಸಿ, ಕಾರಣವನ್ನು ಪತ್ತೆಹಚ್ಚಲಾಗುವುದು. ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಹೇಳಿದ್ದಾರೆ.



## 2 ಲಕ್ಷ ಪರಿಹಾರ: ಮೋದಿ ಸಂತಾಪ

**ಬೆಂಗಳೂರು:** ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿ ಬಳಿ ನಡೆದ ರಸ್ತೆ ಅಪಘಾತದಲ್ಲಿ ಮೃತಪಟ್ಟವರ ಕುಟುಂಬಕ್ಕೆ ಪ್ರಧಾನ ಮಂತ್ರಿ ಪರಿಹಾರ ನಿಧಿಯಿಂದ 2 ಲಕ್ಷ ರೂ. ಪರಿಹಾರ ನೀಡುವುದಾಗಿ ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ.



ಈ ಬಗ್ಗೆ ಪ್ರಧಾನ ಮಂತ್ರಿ ಕಾರ್ಯಾಲಯದ ಎಕ್ಸ್ ಪೋಸ್ಟ್ ನಲ್ಲಿ ಮಾಹಿತಿ ನೀಡಲಾಗಿದೆ. ಕರ್ನಾಟಕದ ಚಿತ್ರದುರ್ಗ ಜಿಲ್ಲೆಯಲ್ಲಿ ಸಂಭವಿಸಿದ ಅಪಘಾತದಲ್ಲಿ ಪ್ರೀತಿಪಾತ್ರರನ್ನು ಕಳೆದುಕೊಂಡವರಿಗೆ ಸಂತಾಪ ಸೂಚಿಸುತ್ತೇನೆ. ಗಾಯಗೊಂಡವರು ಆದಷ್ಟು ಬೇಗ ಚೇತರಿಸಿಕೊಳ್ಳಲಿ ಎಂದು ಮೋದಿ ಹಾರೈಸಿದ್ದಾರೆ. ಮೃತರ ಕುಟುಂಬಕ್ಕೆ ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ 2 ಲಕ್ಷ ಹಾಗೂ ಗಾಯಗೊಂಡವರ ಕುಟುಂಬಕ್ಕೆ 50 ಸಾವಿರ ನೀಡಲಾಗುವುದು ಎಂದು ಪಿಎಂಒ ತಿಳಿಸಿದೆ.

# ಇಂದು ದೆಹಲಿಗೆ ಸಿದ್ದರಾಮಯ್ಯ

## ಡಿ.27ರಂದು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಭಾಗಿ

**ಬೆಂಗಳೂರು:** ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಭಾಗಿಯಾಗಲು ಸಿಎಂ ಸಿದ್ದರಾಮಯ್ಯ ಶುಕ್ರವಾರ ದೆಹಲಿಗೆ ತೆರಳಲಿದ್ದಾರೆ. ದೆಹಲಿಯಯ ಇಂದಿರಾ ಭವನದಲ್ಲಿ ಡಿ.27ರಂದು ಸಿಡಬ್ಲ್ಯೂಸಿ ಸಭೆ ಅಯೋಜನೆ ಮಾಡಲಾಗಿದೆ.



ಈ ಸಭೆಯಲ್ಲಿ ಭಾಗಿಯಾಗುವಂತೆ ಕಾಂಗ್ರೆಸ್ ಅಧಿಕಾರದಲ್ಲಿರುವ ಮೂರು ರಾಜ್ಯಗಳ ಮುಖ್ಯಮಂತ್ರಿಗಳಿಗೆ ಕಾಂಗ್ರೆಸ್ ಹೈಕಮಾಂಡ್ ಆಹ್ವಾನ ನೀಡಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ತೆಲಂಗಾಣದ ರೇವಂತ್ ರೆಡ್ಡಿ, ಹಿಮಾಚಲ ಪ್ರದೇಶದ ಸಿಎಂ ಸುಖ್ವಿಂದರ್ ಸಿಂಗ್ ಸುಖು ಭಾಗಿಯಾಗಲಿದ್ದಾರೆ. ಕರ್ನಾಟಕದಿಂದ ಸಿಡಬ್ಲ್ಯೂಸಿ ಸದಸ್ಯರಾದ ಬಿ.ಕೆ.ಹರಿಪ್ರಸಾದ್, ನಾಸೀರ್ ಹುಸೇನ್ ಹಾಗೂ ವೀರಪ್ಪ ಮೊಯ್ಲಿ ಪಾಲ್ಗೊಳ್ಳಲಿದ್ದಾರೆ.

ಈ ಮೊದಲು ಸಿಡಬ್ಲ್ಯೂಸಿ ಸಭೆಗೆ ನನಗೆ ಆಹ್ವಾನವಿಲ್ಲ ಎಂದು ಸಿದ್ದರಾಮಯ್ಯ ಹೇಳಿದ್ದರು.

ಪುಟ 2ಕ್ಕೆ

## ಡಿಕೆಶಿಗೆ ಆಹ್ವಾನ ಬಂದಿಲ್ಲ: ಖರ್ಗೆ ಭೇಟಿ ಮಾಡಿ ಚರ್ಚೆ

ಬೆಂಗಳೂರು: ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ಆಹ್ವಾನ ಬಂದಿಲ್ಲ. ಬದಲಿಗೆ ಸಿಎಂ ಸಿದ್ದರಾಮಯ್ಯಗೆ ಮಾತ್ರ ಆಹ್ವಾನ ನೀಡಲಾಗಿದೆ. ಹೀಗಾಗಿ ಸಿದ್ದರಾಮಯ್ಯ ದೆಹಲಿಗೆ ತೆರಳಲಿದ್ದಾರೆ. ಈ ಎಲ್ಲಾ ಬೆಳವಣಿಗೆಗಳ ನಡುವೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು, ಬೆಂಗಳೂರಿನಲ್ಲಿ ದಿಢೀರ್ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಮಹತ್ವದ ಚರ್ಚೆ ಮಾಡಿದ್ದಾರೆ. ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಡಿಕೆಶಿ, ಡಿಸೆಂಬರ್ 27ರಂದು ದೆಹಲಿಯಲ್ಲಿ ಕಾಂಗ್ರೆಸ್ ಕಾರ್ಯಕಾರಿಣಿ ಸಭೆ ಇದೆ. ಸಿಡಬ್ಲ್ಯುಸಿ ಸಭೆಗೆ ನನ್ನನ್ನು

ಪುಟ 2ಕ್ಕೆ

# ಕಸ ಗುಡಿಸಿ, ಪಕ್ಷದ ಬಾವುಟ ಕಟ್ಟಿರುವೆ

## ಕಾಂಗ್ರೆಸ್ ಹೈಕಮಾಂಡ್, ವಿರೋಧಿಗಳಿಗೆ ಡಿ.ಕೆ.ಶಿವಕುಮಾರ್ ಮಾರ್ಮಿಕ ಮಾತು

**ಬೆಂಗಳೂರು:** ನಾನು ಕಾಂಗ್ರೆಸ್ ಕಾರ್ಯಕರ್ತನಾಗಿ ಕಸ ಗುಡಿಸಿದ್ದೇನೆ. ಅಧ್ಯಕ್ಷನಾಗಿ ಪಕ್ಷದ ಬಾವುಟ ಕಟ್ಟಿ, ಎಲ್ಲ ಕೆಲಸ ಮಾಡಿದ್ದೇನೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಮಾರ್ಮಿಕವಾಗಿ ತಿರುಗೇಟು ನೀಡಿದ್ದಾರೆ. ಈ ಮೂಲಕ ತಾವು ಸಿಎಂ ಸ್ಥಾನಕ್ಕೆ ಅರ್ಹ ಎಂಬುದನ್ನು ಪರೋಕ್ಷವಾಗಿ ತಿಳಿಸಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ ನಂತರ ಗುರುವಾರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಪಕ್ಷದ ಕಾರ್ಯಕರ್ತನಾಗಿಯೇ ಇರಲು ಬಯಸುತ್ತೇನೆ ಎಂಬ ಹೇಳಿಕೆ ಬಗ್ಗೆ ಕೇಳಿದಾಗ, ನಾನು ಲೈಫ್ ಟೈಮ್ ಕಾರ್ಯಕರ್ತ. ನಾನು ಒಬ್ಬ ವರ್ಕರ್. ಅಧ್ಯಕ್ಷನಾದಾಗಲೂ ಪಕ್ಷದ ಬಾವುಟ ಕಟ್ಟಿದ್ದೇನೆ. ಕಾರ್ಯಕರ್ತನಾದಾಗಲೂ ಬಾವುಟ ಕಟ್ಟಿದ್ದೇನೆ. ಪೋಸ್ಟರ್ ಅಂಟಿಸಿದ್ದೇನೆ. ಕಸ ಗುಡಿಸಿದ್ದೇನೆ. ಕಾಂಗ್ರೆಸ್ ಪಕ್ಷಕ್ಕೆ ಏನೇನು ಬೇಕೋ ಎಲ್ಲವನ್ನೂ ಮಾಡಿದ್ದೇನೆ ಎಂದು ಹೇಳುವ ಮೂಲಕ ಕಾಂಗ್ರೆಸ್ ಹೈಕಮಾಂಡ್‌ಗೆ ಸಂದೇಶ ರವಾನಿಸುವ ಕೆಲಸ ಮಾಡಿದ್ದಾರೆ.



ಖರ್ಗೆ ಅವರ ಜೊತೆ ನಾಯಕತ್ವ ವಿಚಾರವಾಗಿ ಚರ್ಚೆ ನಡೆಸಿದ್ದೀರಾ ಎಂದು ಕೇಳಿದಾಗ, ಯಾವ ವಿಚಾರವಾಗಿಯೂ ಚರ್ಚೆ ನಡೆಸಿಲ್ಲ. ನಾನು ಚರ್ಚೆ ಮಾಡುವುದೂ ಇಲ್ಲ. ಮಾಡುವ ಅವಶ್ಯಕತೆಯೂ ಇಲ್ಲ. ನಾನು ಮತ್ತು ಸಿದ್ದರಾಮಯ್ಯ ಅವರು ಈಗಾಗಲೇ ಇದರ ಬಗ್ಗೆ ಹೇಳಿದ್ದೇವೆ. ಹೈಕಮಾಂಡ್ ಏನು ಹೇಳುತ್ತದೆಯೋ ಅದರಂತೆ ಕೆಲಸ ಮಾಡಿಕೊಂಡು ಹೋಗುತ್ತೇವೆ. ಅವರು ಏನು

ಪುಟ 2ಕ್ಕೆ

## ಡಿಕೆಸು ಮಾರ್ಮಿಕ ಪೋಸ್ಟ್

ಬೆಂಗಳೂರು: ಮಾಜಿ ಸಂಸದ ಡಿ.ಕೆ ಸುರೇಶ್ ಮಾಡಿರುವ ಮಾರ್ಮಿಕ ಪೋಸ್ ಕೀಗ ಚರ್ಚೆಗೆ ಗ್ರಾಸವಾಗಿದೆ. ಗುರಿಯನ್ನು ಬೇಗ ತಲುಪಬೇಕು ಎನ್ನುವವರು ದಾರಿಯಲ್ಲಿ ವಿಶ್ರಮಿಸುತ್ತಾ ಕುಳಿತುಕೊಳ್ಳಬಾರದು ಎಂದು ಪೋಸ್ಟ್ ಮಾಡಿದ್ದಾರೆ.



ಯಾವ ಅರ್ಥದಲ್ಲಿ ಈ ಪೋಸ್ಟ್ ಮಾಡಿದ್ದಾರೆ ಎಂಬುದು ಕುತೂಹಲಕ್ಕೆ ಕಾರಣವಾಗಿದೆ.

## ಮೊದಲ ಪುಟದಿಂದ

### ನವ್ಯಾಗೆ ಮದುವೆ ಫಿಕ್ಸ್ ಆಗಿತ್ತು

ಮಿಲನ ಮೂವರು ಬೆಸ್ಟ್ ಫ್ರೆಂಡ್ಸ್ ಆಗಿದ್ದರು. ಮೂವರು ಒಟ್ಟಿಗೆ ಇಂಜಿನಿಯರಿಂಗ್ ಓದಿ, ಸಾಫ್ಟ್ವೇರ್ ಇಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದರು. ಸದ್ಯ ರಜೆ ಇತ್ತು ಎಂಬ ಕಾರಣಕ್ಕೆ ಸಿಗಂದೂರಿಗೆ ಹೊರಟಿದ್ದರು. ನನಗೆ ಒಬ್ಬನೇ ಮಗ ಹಾಗೂ ಒಬ್ಬಳೇ ಮಗಳಿದ್ದಾಳೆ. ಏಪ್ರಿಲ್‌ನಲ್ಲಿ ನವ್ಯಾ ಮದುವೆ ಕೂಡ ಫಿಕ್ಸ್ ಆಗಿತ್ತು ಎಂದು ಹೇಳಿದರು.

### ಟ್ಯಾಂಕ್‌ಗೆ ಡಿಕ್ಕಿಯಿಂದ ಹೊತ್ತಿ ಉರಿದ ಬಸ್

ಹೊರ ಬಿದ್ದಿದ್ದೆ. ನೋಡ ನೋಡುತ್ತಿದ್ದಂತೆ ಧಗಧಗನೆ ಬಸ್ ಹೊತ್ತಿ ಉರಿಯತೊಡಗಿತು. ಡ್ರೈವರ್ ಹೊರ ಬಿದ್ದಿದ್ದು ಅವರ ಕಾಲು ಕೈಗಳಿಗೆ ಗಂಭೀರ ಗಾಯವಾಗಿದೆ. ಕೂಡಲೇ ಸ್ಥಳೀಯರು ನಮ್ಮ ಸಹಾಯಕ್ಕೆ ಬಂದರು. ಅಪಘಾತವಾಗುತ್ತಿದ್ದಂತೆ ಏನು ಆಗಿದೆ ಎನ್ನುವುದು ಗೊತ್ತಾಗದೆ ಶಾಕ್‌ನಲ್ಲಿ ಇದ್ದೆವು ಎಂದು ತಿಳಿಸಿದರು.

### ಶವ ಗುರುತಿಸಿದ ತಂದೆ

ಈ ಕುರಿತು ಮಾನಸಾ ತಂದೆ ಚಂದ್ರೇಗೌಡ ಮಾತನಾಡಿ, ಮಗಳಿಗೆ ಪ್ರೀತಿಯಿಂದ ಚಿನ್ನದ ಸರ ಹಾಗೂ ಗಣೇಶನ ಡಾಲರ್ ಕೊಡಿಸಿದ್ದೆ. ಎಂಗೇಜ್‌ಮೆಂಟ್ ಆಗಿತ್ತು. ಮದುವೆಗೆ ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಂಡಿದ್ದೆವು. ಆದರೆ ವಿಧಿಯಾಟ ಅವಳು ಬದುಕುಳಿಯಲಿಲ್ಲ. ಕೊನೆಗೆ ಬೆಂಗಳೂರಿನಿಂದ ಗೋಕರ್ಣ ಹೋಗಲು ನಾನೇ ಹೋಗಿ ಬಸ್ ಹತ್ತಿಸಿದ್ದೆ ಎಂದು ಕಣ್ಣೀರಿಟ್ಟರು.

### 6 ಮಂದಿ ಸಜೀವ ದಹನ

ಹೇಗೆ ಸಂಭವಿಸಿತು ಎಂಬುದರ ಕುರಿತು ತನಿಖೆ ನಡೆಯುತ್ತಿದೆ. ಶಾಲಾ ಮಕ್ಕಳ ಪ್ರವಾಸಕ್ಕೆ ಹೊರಟಿದ್ದ ಬಸ್ ಚಾಲಕ ಸಚಿನ್ ಘಟನೆಯನ್ನು ಪ್ರತ್ಯಕ್ಷ ಕಂಡಿದ್ದಾರೆ. ಅಲ್ಲದೆ, ಹೊತ್ತಿ ಉರಿಯುತ್ತಿದ್ದ ಬಸ್ ನಲ್ಲಿದ್ದ ಹಲವರನ್ನು ರಕ್ಷಿಸುವಲ್ಲಿ ಯಶಸ್ವಿ ಆಗಿದ್ದಾರೆ. ಮಧ್ಯರಾತ್ರಿ ಎರಡು ಗಂಟೆ ಸುಮಾರಿಗೆ ಲಾರಿಯೊಂದು ಡಿವೈಡರ್‌ಗೆ ಡಿಕ್ಕಿ ಹೊಡೆದು ಹಾರಿ ಬಂದು ಸ್ಲೀಪರ್ ಬಸ್ಸಿನ ಡೀಸೆಲ್ ಟ್ಯಾಂಕ್‌ಗೆ ಹೊಡೆದಿದೆ. ಕೂಡಲೇ ಬೆಂಕಿ ಕಾಣಿಸಿಕೊಂಡು ಸ್ಫೋಟವೂ ಸಂಭವಿಸಿತು. ಶಾಲಾ ಬಸ್ಸನ್ನು ಮುಂದಕ್ಕೆ ನಿಲ್ಲಿಸಿ, ಅಪಘಾತಕ್ಕೀಡಾದ ಬಸ್ಸಿನಲ್ಲಿದ್ದ 7 ಜನರ ರಕ್ಷಣೆಗೆ ನಾನು ಕೂಡ ಹೋಗಿದ್ದೆ ಎಂದು ಸಚಿನ್ ತಿಳಿಸಿದ್ದಾರೆ.

### ಲಾರಿ ಚಾಲಕ ಕಾರಣ

ಡಿವೈಡರ್ ದಾಟಿ ಬಂದು ಬಸ್‌ನ ಡೀಸೆಲ್ ಟ್ಯಾಂಕ್‌ಗೆ ಲಾರಿ ಗುದ್ದಿದೆ. ಸಾರಿಗೆ ಇಲಾಖೆ ಕಮಿಷನರ್ ತನಿಖೆ ಕೈಗೊಂಡಿದ್ದಾರೆ. ಯಾವ ಕಾರಣಕ್ಕೆ ಬೆಂಕಿ ಹೊತ್ತಿಕೊಂಡಿದೆ ಎಂಬ ಬಗ್ಗೆ ತನಿಖೆ ನಡೆಸಬೇಕಿದೆ ಎಂದು ಹೇಳಿದರು. ಬಸ್ ಗಳಲ್ಲಿ ಯಾವುದೇ ರೀತಿಯ ಸ್ಫೋಟಕ ವಸ್ತುಗಳನ್ನು ಸಾಗಿಸದಂತೆ ಎಚ್ಚರ ವಹಿಸಿದ್ದೇವೆ. ಎಲ್ಲಾ ಬಸ್‌ಗಳಲ್ಲೂ ಎಮರ್ಜೆನ್ಸಿ ಡೋರ್ ಕಡ್ಡಾಯ ಮಾಡಲಾಗಿದೆ. ಈ ಅವಘಡ ಲಾರಿ ಚಾಲಕನ ಅಜಾಗರೂಕತೆಯಿಂದ ಆಗಿದೆ. ಎಲ್ಲಾ ರೀತಿಯ ಕ್ರಮ ಕೈಗೊಳ್ಳುವಂತೆ ಸಿಎಂ ತಿಳಿಸಿದ್ದಾರೆ ಎಂದು ಹೇಳಿದರು.

### ಕೈನಿಂದಲೇ ವೋಟ್ ಚೋರಿ!

ಮಾಡುವ ಮೂಲಕ ಬಿಜೆಪಿಗೆ ಕಳಂಕ ಹಚ್ಚುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು. ಮೋದಿ ಅವರ ಸರ್ಕಾರ ಭ್ರಷ್ಟಾಚಾರ ರಹಿತ ಸರ್ಕಾರ ದೇಶದಲ್ಲಿರುವ ಯಾವುದೇ ವಿರೋಧ ಪಕ್ಷಗಳು ಕೂಡ ನಮ್ಮ ಸರ್ಕಾರದ ಬಗ್ಗೆ ಭ್ರಷ್ಟಾಚಾರದ ಬಗ್ಗೆ ಆರೋಪ ಮಾಡಲು ಸಾಧ್ಯವಿಲ್ಲ. ಯಾಕೆ ಅಂದರೆ ಮೋದಿಗೆ ವಾಜಪೇಯಿಯವರು ಪ್ರೇರಣೆಯಾಗಿದ್ದಾರೆ ಎಂದು ಬಿವೈ ವಿಜಯೇಂದ್ರ ತಿಳಿಸಿದರು.

### ಮೂವರು ಗ್ರೇಟ್ ಎಸ್ಕೇಪ್

**ಬೆಂಗಳೂರು ಮೂಲದ ರಕ್ಷಿತಾ, ಗಗನ ಹಾಗೂ ಗೋಕರ್ಣ ಮೂಲದ ರಶ್ಮಿ ಅದೃಷ್ಟವಶಾತ್ ಪಾರಾಗಿದ್ದಾರೆ. ಮೂವರು ಕೂಡ ಬೆಂಗಳೂರಿನ ಡೈಲೈಟ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ರಜೆಯಿರುವ ಹಿನ್ನೆಲೆ ಮೂವರು ಸೇರಿ ಗೋಕರ್ಣಕ್ಕೆ ತೆರಳುತ್ತಿದ್ದರು. ಈ ವೇಳೆ ಅಪಘಾತ ಸಂಭವಿಸಿದೆ.**

### ಪಕ್ಷದ ಬಾವುಟ ಕಟ್ಟಿರುವೆ

ಹೇಳುತ್ತಾರೋ ಆ ರೀತಿ ಕೇಳಿಕೊಂಡು ಹೋಗುತ್ತೇವೆ ಎಂದರು.

ಸ್ಥಳೀಯ ಮಟ್ಟದಲ್ಲಿ ಗೊಂದಲ ಬಗೆಹರಿಸಿಕೊಳ್ಳಿ ಎಂದು ಮಲ್ಲಿಕಾರ್ಜುನ ಖರ್ಗೆ ಅವರು ಹೇಳಿರುವ ಬಗ್ಗೆ ಕೇಳಿದಾಗ, ಹಿರಿಯರು ಮಾರ್ಗದರ್ಶನ ನೀಡುತ್ತಾರೆ. ಮನರೇಗಾ ಯೋಜನೆಯ ಹೆಸರು ಬದಲಾವಣೆ, ಅನುದಾನದಲ್ಲಿ ರಾಜ್ಯದ ಪಾಲನ್ನು ಶೇ.40ಕ್ಕೆ ಹೆಚ್ಚಿಸಿರುವುದು ಸೇರಿದಂತೆ ರೈತರಿಗೆ ಮಾರಕವಾದಂತಹ ಬದಲಾವಣೆಗಳನ್ನು ಕೇಂದ್ರ ಸರ್ಕಾರ ಜಾರಿಗೆ ತಂದಿದೆ. ಈ ವಿಚಾರವಾಗಿ ಒಂದು ರಾಜ್ಯದ ಅಧ್ಯಕ್ಷನಾಗಿ ನನ್ನ ಅಭಿಪ್ರಾಯಗಳನ್ನು ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರಿಗೆ ತಿಳಿಸಿದ್ದೇನೆ. ಅವರ ಜೊತೆ ಯಾವ ರಾಜಕೀಯ ಮಾತುಕತೆಯೂ ಮಾಡಿಲ್ಲ ಎಂದು ಸ್ಪಷ್ಟನೆ ನೀಡಿದರು.

### 43 ಶಾಲಾ ಮಕ್ಕಳನ್ನು ರಕ್ಷಿಸಿದ ಚಾಲಕ

ಬಸ್ ನಲ್ಲಿದ್ದ ಕೆಲ ಪ್ರಯಾಣಿಕರನ್ನು ರಕ್ಷಿಸಿದರು ಎಂದು ಪೊಲೀಸರು ತಿಳಿಸಿದರು.

### ಡಿಕೆಶಿಗೆ ಆಹ್ವಾನ ಬಂದಿಲ್ಲ: ಖರ್ಗೆ ಭೇಟಿ ಮಾಡಿ ಚರ್ಚೆ

**ಕರೆದಿಲ್ಲ. ಕರೆದರೆ ನಾನು ಹೋಗುತ್ತೇನೆ. ಸಿಎಂ ಸಿದ್ದರಾಮಯ್ಯರನ್ನು ಸಿಡಬ್ಲ್ಯುಸಿ ಸಭೆಗೆ ಕರೆದ ಮಾಹಿತಿ ಇದೆ. ಸಭೆಯಲ್ಲಿ ಭಾಗಿಯಾಗಲು ಸಿಎಂ ದೆಹಲಿಗೆ ಹೋಗುತ್ತಾರೆ ಎಂದು ಹೇಳುವ ಮೂಲಕ ಪರೋಕ್ಷವಾಗಿ ಅಸಮಾಧಾನ ವ್ಯಕ್ತಪಡಿಸಿದರು.**

### ಇಂದು ದೆಹಲಿಗೆ ಸಿದ್ದರಾಮಯ್ಯ

ಈಗ ನಾಳೆ ಸಿಎಂ ದೆಹಲಿಗೆ ಹೋಗುವುದು ಅಧಿಕೃತವಾಗಿದೆ. ಐದು ರಾಜ್ಯಗಳ ಚುನಾವಣೆ, ಓಟ್ ಚೋರಿ, ನ್ಯಾಷನಲ್ ಹೆರಾಲ್ಡ್ ಮತ್ತು ಮನರೇಗಾ ಕಾಯ್ದೆ ತಿದ್ದುಪಡಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ವಿರುದ್ಧ ಹೋರಾಟ ರೂಪಿಸುವ ಬಗ್ಗೆ ಚರ್ಚೆ ನಡೆಯಲಿದೆ ಎನ್ನಲಾಗಿದೆ.

## ಅಟಲ್ ಜೀಗೆ ದೀಪ ನಮನ



ಮೈಸೂರು: ಬಿಜೆಪಿ ಚಾಮುಂಡೇಶ್ವರಿ ನಗರ ಮಂಡಲದಿಂದ ಮಾಜಿ ಪ್ರಧಾನಮಂತ್ರಿ ದಿವಂಗತ ಅಟಲ್ ಬಿಹಾರಿ ವಾಜಪೇಯಿಯವರ ಜನ್ಮದಿನದಂದು ಕಮಲ ದೀಪ ನಮನ ಸಲ್ಲಿಸಿ ಆಚರಿಸಲಾಯಿತು.

ರಾಮಕೃಷ್ಣ ಪರಮಹಂಸ ವೃತ್ತದಲ್ಲಿ ವಾಜಪೇಯಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಕಮಲ ದೀಪ ಬೆಳಗಿಸಿ ನಮನ ಸಲ್ಲಿಸಿ ಸಿಹಿ ವಿತರಿಸಲಾಯಿತು. ಈ ಸಂದರ್ಭದಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಅಧ್ಯಕ್ಷ ರಾಕೇಶ್ ಭಟ್, ನಗರ ಪ್ರಧಾನ ಕಾರ್ಯದರ್ಶಿಗಳಾದ ಬಿ.ಎಂ.ರಘು, ರುದ್ರಮೂರ್ತಿ, ಪಾಲಿಕೆ ಮಾಜಿ ಸದಸ್ಯೆ ಲಕ್ಷ್ಮಿ ಕಿರಣ್, ಮಂಡಲದ ಉಪಾಧ್ಯಕ್ಷ ಹೆಚ್.ಜಿ.ರಾಜಮಣಿ, ಶಿವು ಪಟೇಲ್, ಬಿ.ಸಿ.ಶಶಿಕಾಂತ್, ಹೆಚ್.ಎಸ್.ಹಿರಿಯಣ್ಣ, ನಾಗರಾಜ್ ಜನ್ನು, ಈರೇಗೌಡ, ಮಹಿಳಾ ಮೋರ್ಚಾ ನಗರ ಕಾರ್ಯದರ್ಶಿ ವಿಜಯಾ ಮಂಜುನಾಥ್, ಮಂಡಲ ಪ್ರಧಾನ ಕಾರ್ಯದರ್ಶಿಗಳಾದ ಮಂಜುಳಾ, ಪುಟ್ಟಮ್ಮಣ್ಣಿ, ಮುಖಂಡರಾದ ಬಸವಣ್ಣ, ರಮಾಬಾಯಿ, ವಸುಮತಿ, ಪಿ. ಸೋಮಣ್ಣ, ರಂಗೇಶ್, ಕಲಾವತಿ, ವಿನುತಾ, ದೇವರಾಜ್, ಗೀತಾ ಮಹೇಶ್, ಹೇಮಲತಾ, ಪ್ರವೀಣ್ ಜೋನ್ಸ್, ಪ್ರೇಮ, ರಶ್ಮಿ, ರಾಧಾ ಮುತಾಲಿಕ್, ಸುಮಾ ಭಾಗವಹಿಸಿದ್ದರು.

## ಬಹುಮಾನ ವಿತರಿಸಿ ಅಟಲ್ ಜೀ ಸ್ಮರಣೆ



ಮೈಸೂರು: ಚಾಮುಂಡಿಪುರಂ ವೃತ್ತದಲ್ಲಿ ತಗಡೂರು ರಾಮಚಂದ್ರರಾವ್ ಉದ್ಯಾನವನದಲ್ಲಿ ವಾರ್ಡ್ ನಂ.55ರ ನಗರಪಾಲಿಕೆ ಮಾಜಿ ಸದಸ್ಯ ಮಾ.ವಿರಾಮ್ ಪ್ರಸಾದ್ ನೇತೃತ್ವದಲ್ಲಿ ಮಕ್ಕಳಿಗೆ ಚಿತ್ರಕಲಾ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸುವ ಹಾಗೂ ವಿವಿಧ ಜಾತಿಯ ಗಿಡಗಳನ್ನು ನೆಡುವ ಮೂಲಕ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಹುಟ್ಟುಹಬ್ಬಕ್ಕೆ ಶಾಸಕ ಶ್ರೀವತ್ಸ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಅಟಲ್ ಬಿಹಾರಿ ವಾಜಪೇಯಿ ಮೂರು ಬಾರಿ ಪ್ರಧಾನಮಂತ್ರಿಗಳಾಗಿ ತಮ್ಮದೇ ಆದ ಅಭೂತಪೂರ್ವ ಸೇವೆ ಸಲ್ಲಿಸಿದ್ದಾರೆ. ಭಾರತೀಯರ ಪ್ರತಿಯೊಬ್ಬರ ಕನಸಾಗಿದ್ದ ಅಯೋಧ್ಯೆ ರಾಮಜನ್ಮ ಭೂಮಿ ನಿರ್ಮಾಣ ಹೋರಾಟ ಸಾಕಾರಗೊಳ್ಳಲು ವಿಜಯಸಂಕಲ್ಪ ಯಾತ್ರೆ ಆರಂಭಿಸಿದವರಾಗಿದ್ದಾರೆ. ಅವರು ರಾಜಕೀಯದಲ್ಲಿ ಅಜಾತಶತ್ರುವಾಗಿದ್ದರೆಂದರು. ಬಿಜೆಪಿ ಕೃಷ್ಣರಾಜ ಕ್ಷೇತ್ರದ ಅಧ್ಯಕ್ಷ ಗೋಪಾಲ್ ರಾಜ್, ಬಿಜೆಪಿ ಮುಖಂಡರಾದ ಪ್ರದೀಪ್ ಕುಮಾರ್, ಪುರುಷೋತ್ತಮ್, ಮಂಜುನಾಥ್, ಧರ್ಮೇಂದ್ರ, ಸೋಮೇಶ್, ನಿರಂಜನ್, ರವಿ, ಶ್ರೀಕಂಠ, ವೀರೇಶ್ ಇನ್ನಿತರರು ಭಾಗಿಯಾಗಿದ್ದರು.

## ಸಂತ ಫಿಲೋಮಿನಾಸ್ ಚರ್ಚ್‌ನಲ್ಲಿ ಸಾಮೂಹಿಕ ಪ್ರಾರ್ಥನೆ

ಮೈಸೂರು: ಶಾಂತಿ ಮತ್ತು ಸ್ನೇಹದ ಸಂಕೇತ ಕ್ರಿಸ್‌ಮಸ್ ಹಬ್ಬವನ್ನು ಎಲ್ಲೆಡೆ ಸಡಗರ ಸಂಭ್ರಮಗಳಿಂದ ಆಚರಿಸಲಾಗುತ್ತಿದ್ದು ಮೈಸೂರಿನ ಸಂತ ಫಿಲೋಮಿನಾಸ್ ಚರ್ಚ್‌ನಲ್ಲಿ ಮಧ್ಯರಾತ್ರಿ ವಿಶೇಷ ಪ್ರಾರ್ಥನೆ ನಡೆಯಿತು. ವಿದ್ಯುತ್ ದೀಪಾಲಂಕಾರ, ಕಲಾಕೃತಿಗಳ ಸಿಂಗಾರ, ನಕ್ಷತ್ರಗಳ ಚಿತ್ತಾರಗಳಿಂದ ಕಂಗೊಳಿಸುತ್ತಿರುವ ಸಂತ ಫಿಲೋಮಿನಾಸ್ ಚರ್ಚ್‌ನಲ್ಲಿ ಬಾಲ ಯೇಸುವಿನ ಪ್ರತಿಷ್ಠಾಪಿಸಿ ಸಮ್ಮೂಹ ಪ್ರಾರ್ಥನೆ ನಡೆಸಲಾಯಿತು.

ಕ್ರಿಸ್‌ಮಸ್ ಹಬ್ಬದ ಪ್ರಮುಖ ಕಾರ್ಯಕ್ರಮವಾಗಿ ತಡರಾತ್ರಿ ವಿಶೇಷ ಪ್ರಾರ್ಥನಾ ವಿಧಿಗಳು ಜರುಗಿದವು. ಸಾವಿರಾರು ಕ್ರೈಸ್ತ ಬಾಂಧವರು ಚರ್ಚ್‌ಗೆ ಆಗಮಿಸಿ ಯೇಸು ಕ್ರಿಸ್ತನ ಜನನವನ್ನು ಭಕ್ತಿಭಾವದಿಂದ ಸ್ಮರಿಸಿದರು. ಚರ್ಚ್ ಆವರಣದಲ್ಲಿ ಕ್ರಿಸ್‌ಮಸ್ ಕೇರೋಲ್ ಹಾಡುಗಳು, ಪ್ರಾರ್ಥನಾ ಗೀತಗಳು ಮೊಳಗಿತು. ಮೈಸೂರಿನ ಬಿಷಪ್ ಮೋಸ್ಟ್ ರೆವರೆಂಡ್ ಡಾ. ಎಸ್.ಜೆ. ಫ್ರಾನ್ಸಿಸ್ ಸೆರ್ರೋ ಅವರ ನೇತೃತ್ವದಲ್ಲಿ ಸಾಮೂಹಿಕ ಪ್ರಾರ್ಥನಾ ವಿಧಿಗಳು ಜರುಗಿತು. ಹಬ್ಬದ ಅಂಗವಾಗಿ ದೇಶದ ಶಾಂತಿ, ರಾಜ್ಯದ ಸಮೃದ್ಧಿ ಹಾಗೂ ಜನರ ಆರೋಗ್ಯಕ್ಕಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ಯೇಸು ಕ್ರಿಸ್ತನು ಸಾರಿದ ಪ್ರೀತಿ, ಕ್ಷಮೆ ಹಾಗೂ ಸಹೋದರತ್ವದ ಸಂದೇಶವನ್ನು ನೆನಪಿಸಿಕೊಂಡ ಭಕ್ತರು ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಈ ವೇಳೆ ಕ್ರಿಸ್‌ಮಸ್ ಹಬ್ಬದ ಸಂತೋಷ ಎಲ್ಲರ ಮುಖದಲ್ಲೂ ಸ್ಪಷ್ಟವಾಗಿ ಕಂಡುಬಂತು. ಮಕ್ಕಳಿಗಾಗಿ ಸಾಂಟಾ ಕ್ಲಾಸ್ ವೇಷಧಾರಿಗಳು ವಿಶೇಷ ಆಕರ್ಷಣೆಯಾಗಿದ್ದು, ಮಕ್ಕಳಿಗೆ ಸಿಹಿ ಪದಾರ್ಥಗಳು ಹಾಗೂ ಉಡುಗೊರೆಗಳನ್ನು ವಿತರಿಸಿದರು. ಇದರಿಂದ ಮಕ್ಕಳಲ್ಲಿ ಹಬ್ಬದ ಖುಷಿ ಮತ್ತಷ್ಟು ಹೆಚ್ಚಾಯಿತು. ಕುಟುಂಬ ಸಮೇತವಾಗಿ ಜನರು ಚರ್ಚ್‌ಗೆ ಆಗಮಿಸಿ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡರು.

ಪ್ರವಾಸಿ ನಗರಿಯಾಗಿರುವ ಮೈಸೂರಿನಲ್ಲಿ ಕ್ರಿಸ್‌ಮಸ್ ಸಂಭ್ರಮಕ್ಕೆ ದೇಶಿ ಹಾಗೂ ವಿದೇಶಿ ಪ್ರವಾಸಿಗರೂ ಸಾಕ್ಷಿಯಾದರು. ಸಂತ ಫಿಲೊಮಿನಾ ಚರ್ಚ್‌ನಲ್ಲಿ ನಡೆದ ಹಬ್ಬದ ಆಚರಣೆಗಳು ಪ್ರವಾಸಿಗರನ್ನು ಆಕರ್ಷಿಸಿತು. ಚರ್ಚ್ ಸುತ್ತಮುತ್ತ ಸಂಭ್ರಮದ ವಾತಾವರಣ ನಿರ್ಮಾಣಗೊಂಡಿದ್ದು, ಭದ್ರತೆ ಹಾಗೂ ಸಂಚಾರ ನಿಯಂತ್ರಣಕ್ಕಾಗಿ ಪೊಲೀಸ್ ಇಲಾಖೆ ಸೂಕ್ತ ಕ್ರಮಗಳನ್ನು ಕೈಗೊಂಡಿತ್ತು. ಮೈಸೂರು ನಗರದ ಎಲ್ಲ ಚರ್ಚ್‌ಗಳಲ್ಲಿ ಕ್ರಿಸ್‌ಮಸ್ ಸಂಭ್ರಮ ಮನೆ ಮಾಡಿದ್ದು, ಗುರುವಾರ ಬೆಳಗ್ಗೆ, ಮಧ್ಯಾಹ್ನ ಮತ್ತು ಸಂಜೆ ಪ್ರಾರ್ಥನೆಗಳು ಜರುಗಿತು.



## ಸುನಾಮಿ ನೆನಪು: ಸಾವಿರಾರು ಜನರ ಪ್ರಾಣ ಉಳಿಸಿದ ಟಿಲ್ಲಿ ಸ್ಮಿತ್

**ಸ್ವಾಮಿನಾಥನ್**



2004ರ ಡಿಸೆಂಬರ್ 26, ಭಾನುವಾರದ ಬೆಳಗ್ಗೆ. ಕ್ರಿಸ್ಮಸ್ ರಜೆಯ ಸಂಭ್ರಮದಲ್ಲಿದ್ದ ಜಗತ್ತಿಗೆ ಅಚಾನಕ್ ಆಘಾತ ತಂದ ದಿನ. ಹಿಂದೂ ಮಹಾಸಾಗರದಲ್ಲಿ ಸಂಭವಿಸಿದ ಭೀಕರ ಸುನಾಮಿ, ಇಂಡೋನೇಶಿಯಾದಿಂದ ಆರಂಭಿಸಿ ಶ್ರೀಲಂಕಾ, ಭಾರತ, ಥೈಲ್ಯಾಂಡ್‌ವರೆಗೆ ಲಕ್ಷಾಂತರ ಜೀವಗಳನ್ನು ಕಸಿದುಕೊಂಡಿತು. ಆ ಮಹಾವಿಪತ್ತಿನ ನಡುವೆ, ಇತಿಹಾಸದಲ್ಲಿ ಒಂದು ಪ್ರೇರಣಾದಾಯಕ ಅಧ್ಯಾಯ ಬರೆಯಲ್ಪಟ್ಟಿತು. ಅದು ಕೇವಲ 10 ವರ್ಷದ ಬ್ರಿಟಿಷ್ ಹುಡುಗಿಯೊಬ್ಬಳು ಸಮಯೋಚಿತವಾಗಿ ಜನರಲ್ಲಿ ಜಾಗೃತಿ ಮೂಡಿಸಿದ ಕಥೆ. ಆ ಹುಡುಗಿಯೇ ಟಿಲ್ಲಿ ಸ್ಮಿತ್.

ಥೈಲ್ಯಾಂಡ್ನ ಫುಕೆಟ್ ಸಮೀಪದ ಮೈ ಖಾವ್ ಬೀಚ್ನಲ್ಲಿ ಟಿಲ್ಲಿ ತನ್ನ ಪೋಷಕರೊಂದಿಗೆ ಕ್ರಿಸ್ಮಸ್ ರಜೆಯನ್ನು ಆನಂದಿಸುತ್ತಿದ್ದಳು. ಅದು ಬೆಳಗಿನ ಸಮಯ, ಸಮುದ್ರ ಅಚಾನಕ್ ಆಗಿ ವಿಚಿತ್ರವಾಗಿ ಹಿಂದಕ್ಕೆ ಸರಿಯತೊಡಗಿತು. ಸಮುದ್ರದ ನೀರಿನ ಮೇಲ್ಮೈಯಲ್ಲಿ ಏರಿದ ಉಬ್ಬರಗಳು, ವಾತಾವರಣದಲ್ಲಿ ಏನೋ ಏರಿಳಿತ, ಇತರ ಪ್ರವಾಸಿಗರು ಸಮುದ್ರದ ಉಬ್ಬರಗಳನ್ನು , ಏರಿಳಿತಗಳನ್ನು ಕುತೂಹಲದಿಂದ ನೋಡಿ ಸಂತೋಷಪಡುತ್ತಿದ್ದರೆ , ಪುಟ್ಟ ಹುಡುಗಿ ಟಿಲ್ಲಿಗೆ ಸಮುದ್ರದ ಏರಿಳಿತ, ವಾತಾವರಣದಲ್ಲಿ ಏನೋ ಅಸ್ವಾಭಾವಿಕ ಬದಲಾವಣೆ ಆಗುತ್ತಿರುವುದು ಅವಳ ಪುಟ್ಟ ಮೆದುಳಿಗೆ ಗೋಚರಿಸಿತು. ಅದೊಂದು ಭಯಾನಕ ಎಚ್ಚರಿಕೆಯಂತೆ ಕಂಡಿತು.

ಕೆಲವೇ ದಿನಗಳ ಹಿಂದಷ್ಟೇ, ಶಾಲೆಯ ಭೂಗೋಳ ಶಾಸ್ತ್ರ ಪಾಠದಲ್ಲಿ ಟಿಲ್ಲಿ ಸುನಾಮಿ ಬಗ್ಗೆ ಕಲಿತಿದ್ದಳು. "ಸಮುದ್ರ ಅಸಹಜವಾಗಿ ಹಿಂದೆ ಸರಿದರೆ, ದೊಡ್ಡ ಅಲೆ ಬರಲಿದೆ" ಎಂಬ ಪಾಠ ಅವಳ ಮನಸ್ಸಿನಲ್ಲಿ ಸ್ಪಷ್ಟವಾಗಿ ಉಳಿದಿತ್ತು. ಸಮುದ್ರದ ನೊರೆಯಿಂದ ಕೂಡಿದ ಸ್ವಭಾವವನ್ನು ಗಮನಿಸಬೇಕಾದ ಎಚ್ಚ ರಿಕೆ ಚಿಹ್ನೆಗಳ ಬಗ್ಗೆ ಕಲಿತಿದ್ದನ್ನು ಸ್ಮಿತ್ ನೆನಪಿಸಿಕೊಂಡಳು. ಆ ಕ್ಷಣದಲ್ಲಿ, ಆ ಪಾಠವೇ ಅವ ಳಿಗೆ ಜನರ ಜೀವ ಉಳಿಸುವ ಶಕ್ತಿಯಾಯಿತು.

ಟಿಲ್ಲಿ ತಕ್ಷಣ ತನ್ನ ತಂದೆ ತಾಯಿಗೆ, ಅಲ್ಲಿದ್ದ ಪ್ರವಾಸಿಗರಿಗೆ, ಹೋಟೆಲ್ ಸಿಬ್ಬಂದಿಗೆ ಕೂಗಿ ಎಚ್ಚರಿಸಿದಳು?"ಇದು ಸುನಾಮಿ! ಎಲ್ಲರೂ ತಕ್ಷಣ ಸಮುದ್ರದಿಂದ ದೂರ ಹೋಗಬೇಕು!" ಆಕೆ ಅಳುತ್ತಾ, ಗಾಬರಿ ಗೊಂಡು ಹೇಳಿದ ಮಾತುಗಳನ್ನು ಮೊದಲಿಗೆ ಕೆಲವರು ಗಂಭೀರವಾಗಿ ತೆಗೆದುಕೊಳ್ಳಲಿಲ್ಲ. ಆದರೆ ಅವಳ ಆತಂಕ, ಆತ್ಮವಿಶ್ವಾಸ, ಹಾಗೂ ನಿರಂತರ ಒತ್ತಾಯ, ಹೋಟೆಲ್ ಸಿಬ್ಬಂದಿ ಯನ್ನು ತಕ್ಷಣ ಕ್ರಮ ಕೈಗೊಳ್ಳುವಂತೆ ಪ್ರೇರೇಪಿಸಿತು.

ಕ್ಷಣಾರ್ಧದಲ್ಲಿ ಮೈ ಖಾವ್ ಬೀಚ್ ಖಾಲಿ ಮಾಡಿಸಲಾಯಿತು. ಜನರನ್ನು ಮೇಲ್ಮಟ್ಟದ ಪ್ರದೇಶಗಳಿಗೆ ಕರೆದೊಯ್ಯಲಾಯಿತು. ಕೆಲವೇ ನಿಮಿಷಗಳಲ್ಲಿ ಭೀಕರ ಸುನಾಮಿ ಅಲೆಗಳು ಬೀಚ್ಗೆ ಅಪ್ಪಳಿಸಿತು. ಟಿಲ್ಲಿ ಸ್ಮಿತ್ ನೀಡಿದ ಎಚ್ಚರಿಕೆಯಿಂದ ಸುಮಾರು 100ಕ್ಕೂ ಹೆಚ್ಚು ಜನರ ಜೀವಗಳು ಉಳಿದವು. ಅದೊಂದು ಅಚ್ಚರಿ ಸಂಗತಿ?ಆ ಬೀಚ್ನಲ್ಲಿ ಒಬ್ಬರೂ ಪ್ರಾಣ ಕಳೆದುಕೊಳ್ಳಲಿಲ್ಲ. ಒಂದು ಮಗು ಶಾಲೆಯಲ್ಲಿ ಕಲಿತ ಪಾಠ, ಸಾವಿರಾರು ಜೀವಗಳಿಗೆ ರಕ್ಷಣಾ ಕವಚವಾಯಿತು.

ಶಾಲೆಯ ಒಂದು ಸಾಮಾನ್ಯ ಪಾಠ, ಸರಿಯಾದ ಸಮಯದಲ್ಲಿ ಸರಿಯಾದ ನಿರ್ಧಾರಕ್ಕೆ ಕಾರಣವಾಗಬಹುದು ಎಂಬುದನ್ನು ಪುಟ್ಟ ಬಾಲಕಿ ಟಿಲ್ಲಿ ಸ್ಮಿತ್ ಜಗತ್ತಿಗೆ ತೋರಿಸಿದಳು.

ಸುನಾಮಿಯ ನಂತರ, ಟಿಲ್ಲಿ ಸ್ಮಿತ್ಳನ್ನು ಜಗತ್ತು ಗುರುತಿಸಿತು. ಈ ಘಟನೆ ಜಗತ್ತಿನಾದ್ಯಂತ ಸುದ್ದಿಯಾಯಿತು. ಟಿಲ್ಲಿ ಸ್ಮಿತ್ ಧೈರ್ಯ ಮತ್ತು ಜಾಗೃತಿ ಮತ್ತು ಸಮಯ ಪ್ರಜ್ಞೆಗೆ ಎಲ್ಲೆಡೆಯಿಂದ ಮೆಚ್ಚುಗೆ ಬಂತು.

ಟಿಲ್ಲಿ ಸ್ಮಿತ್ ನವೆಂಬರ್ 2005 ರಲ್ಲಿ ವಿಶ್ವಸಂಸ್ಥೆಯಲ್ಲಿ ಶಿಕ್ಷಣದ ಮಹತ್ವವನ್ನು ಎತ್ತಿ ತೋರಿಸುವ ಅಭಿಯಾನದ ಭಾಗವಾಗಿ ಫುಕೆಟ್ನಲ್ಲಿ ನಡೆದ ಮೊದಲ ವಾರ್ಷಿಕೋತ್ಸವದಲ್ಲಿ ಕಾಣಿಸಿಕೊಂಡರು; ಅವರು ವಿಪತ್ತು ಅಪಾಯ ಕಡಿತಕ್ಕಾಗಿ ವಿಶ್ವಸಂಸ್ಥೆಯ ಕಚೇರಿಗಾಗಿ ಶೈಕ್ಷಣಿಕ ವೀಡಿಯೊದಲ್ಲಿಯೂ ಕಾಣಿಸಿಕೊಂಡರು.

9 ಸೆಪ್ಟೆಂಬರ್ 2005 ರಂದು, ಸ್ಮಿತ್ ಎರಡನೇ ಸೀ ಲಾರ್ಡ್, ವೈಸ್-ಅಡ್ಮಿರಲ್ ಸರ್ ಜೇಮ್ಸ್ ಬರ್ನೆಲ್-ನುಜೆಂಟ್ ಅವರಿಂದ ದಿ ಮೆರೈನ್ ಸೊಸೈಟಿ & ಸೀ ಕೆಡೆಟ್ಗಳ ಥಾಮಸ್ ಗ್ರೇ ವಿಶೇಷ ಪ್ರಶಸ್ತಿಯನ್ನು ಪಡೆದರು. ಪತ್ರಿಕೆಗಳಲ್ಲಿ, ಸ್ಮಿತ್ ಅವರನ್ನು ಏಂಜೆಲ್ ಆಫ್ ದಿ ಬೀಚ್ ಎಂದು ಕರೆಯಲಾಯಿತು. ಡಿಸೆಂಬರ್ 2005 ರಲ್ಲಿ, ಫ್ರೆಂಚ್ ನಿಯತಕಾಲಿಕೆ ಮಾನ್ ಕ್ವೋಟಿಡಿಯನ್ (ಮೈ ಡೈಲಿ, ಯುವ ಓದುಗರನ್ನು ಗುರಿಯಾಗಿರಿಸಿಕೊಂಡ ನಿಯತಕಾಲಿಕೆ) ಸ್ಮಿತ್ಗೆ "ವರ್ಷದ ಮಗು" ಎಂದು ಹೆಸರಿಸಲಾಯಿತು.

ಸ್ಮಿತ್ ಅವರ ಕಥೆಯನ್ನು ಮಕ್ಕಳಿಗೆ ಭೂಕಂಪಗಳು, ಸುನಾಮಿಗಳು ಬಂದಾಗ ಸುರಕ್ಷಿತವಾಗಿರುವುದು ಹೇಗೆ ಎಂಬುದರ ಕುರಿತು ಪಠ್ಯ ಪುಸ್ತಕಗಳಲ್ಲಿ ಸೇರಿಸಲಾಗಿದೆ.

## ನಾಳೆ ಉಚಿತ ಆರೋಗ್ಯ ತಪಾಸಣಾ ಶಿಬಿರ



ಮೈಸೂರು: ವಿರಾಟ್ ವಿಶ್ವ ಗ್ಲೋಬಲ್ ಫೌಂಡೇಷನ್, ನಾರಾಯಣ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗೆ ಹಾಗೂ ಮೈಸೂರು ಜಿಲ್ಲಾ ವಿಶ್ವಕರ್ಮ ಸಮಾಜದ ಎಲ್ಲ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಡಿ.27 ರಂದು ಬೆ.9 ರಿಂದ ಸಂಜೆ 4 ರವರೆಗೆ ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳ ವಿಶ್ವಕರ್ಮ ಸಮುದಾಯದವರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಆಯೋಜಿಸಲಾಗಿದೆ ಎಂದು ಫೌಂಡೇಷನ್‌ನ ಆರ್ಥಿಕ ಮುಖ್ಯಸ್ಥ ಸಿ.ಎ.ನಾಗರಾಜಚಾರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ನಗರದ ಪುರಭವನದಲ್ಲಿ ಈ ಆರೋಗ್ಯ ತಪಾಸಣಾ ಶಿಬಿರ ನಡೆಯಲಿದೆ. ಈ ವೇಳೆ ಬಿಪಿ, ಸಕ್ಕರೆ ಕಾಯಿಲೆ, ಸ್ತ್ರೀಯರ ಆರೋಗ್ಯ ಸಮಸ್ಯೆ, ಹೃದಯ ಪರೀಕ್ಷೆ, ಇಸಿಜಿ ಮತ್ತು ಎಕೋ, ಕ್ಯಾನ್ಸರ್ ತಪಾಸಣೆ, ನರರೋಗ ತಪಾಸಣೆ, ಕೀಲು ಮತ್ತು ಮೂಳೆ ಸಂಬಂಧಿತ ಆರೋಗ್ಯ ತಪಾಸಣೆ ನಡೆಯ ಲಿದೆ. ವಿಶ್ವಕರ್ಮ ಸಮುದಾಯದ ಬಡಜನತೆ ಇದರ ಪ್ರಯೋಜನ ಪಡೆಯಬಹುದಾಗಿದೆ ಎಂದು ತಿಳಿಸಿದರು. ಈ ವೇಳೆ ಸುಮಾರು ಒಂದು ಸಾವಿರ ಮಂದಿಗೆ ತಪಾಸಣೆ ನಡೆಸಿ, ಕೆಲವು ಸಮಸ್ಯೆಗಳಿಗೆ ಉಚಿತ ಔಷಧಿ ನೀಡಲಾಗುವುದು. ಪ್ರಯೋಜನ ಪಡೆಯಲು ಬಯಸುವವರು ಹುಚ್ಚಪ್ಪಾಚಾರ್ ದೂ.94487 73981 ಹಾಗೂ ತಮ್ಮ ಭಾಗದಲ್ಲಿನ ಸಮುದಾಯದ ಮುಖಂಡರಿಂದ ಟೋಕನ್ ಪಡೆದು ಹಾಜರಾಗುವಂತೆ ಮನವಿ ಮಾಡಿದರು. ಅಧ್ಯಕ್ಷ ರಾಜೇಶ್, ಚಂದ್ರು ವಿಶ್ವಕರ್ಮ, ಜಯಕುಮಾರ್, ರಾಜು ಕಾರ್ಯ ಮೊದಲಾದವರು ಇದ್ದರು.

## ದಿನದರ್ಶಿಕೆ ಬಿಡುಗಡೆ

ಮೈಸೂರು: ಮೈಸೂರು ಡಿಸೈರ?ಸ್ ಅಂಡ್ ಪ್ರಿಂರ?ಸ್ ಅಸೋಸಿಯೇಷನ್ ವತಿಯಿಂದ ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಕೆ.ದೀಪಕ್ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿದರು.

ಬಳಿಕ ಮಾತನಾಡಿ, ಹಲವಾರು ವರ್ಷಗಳ ಹಿಂದೆ ಕ್ಯಾಲೆಂಡರ್ ಖರೀದಿಸುವುದು ಬಡ ವರ್ಗದವರಿಗೆ ಅಸಾಧ್ಯವಾಗಿತ್ತು. ಹೀಗಾಗಿ ಅಗತ್ಯಬಿದ್ದಾಗ ಬೇರೆಯವರ ಮನೆ ಕ್ಯಾಲೆಂಡರ್ ಅವಲಂಬಿಸುವಂತಾಗಿತ್ತು. ಆದರೆ ಈಚಿನ ವರ್ಷಗಳಲ್ಲಿ ಸಣ್ಣ ಪುಟ್ಟ ಸಂಘ ಸಂಸ್ಥೆಗಳೂ ಕ್ಯಾಲೆಂಡರ್ ಮುದ್ರಿಸಿ ವಿತರಿಸುತ್ತಿವೆ. ಹಲವರು ಪರ್ಸನಲೈಸ್ಡ್ ಕ್ಯಾಲೆಂಡರ್ ಸಹಾ ಮುದ್ರಿಸುತ್ತಾರೆ. ಹೀಗಾಗಿ ಯಾವ ಕ್ಯಾಲೆಂಡರ್ ನೇತು ಹಾಕಬೇಕೆಂಬ ಗೊಂದಲಕ್ಕೊಳಗಾಗುವುದು ಸಹಜ. ಆದರೆ ಈ ಸಂಸ್ಥೆ ಹೊರ ತಂದಿರುವ ಕ್ಯಾಲೆಂಡರ್ ಮಾಹಿತಿಯುಕ್ತವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಂಸ್ಥೆ ಅಧ್ಯಕ್ಷ ಡಿ.ಮಂಜುನಾಥ್ ಮಾತನಾಡಿ, ರಾಜ್ಯ ಹಾಗೂ ಸ್ಥಳೀಯ ವಿಷಯಕ್ಕೆ ಮಾತ್ರವಲ್ಲದೆ, ಪ್ರಪಂಚದ ಏಳು ಅದ್ಭುಗಳ ಚಿತ್ರಗಳನ್ನೂ ಉತ್ತಮ ಗುಣಮಟ್ಟದೊಡನೆ ಮುದ್ರಿಸಲಾಗಿದೆ ಎಂದರು. ಎಂ.ಎಸ್.ರಾಮಚಂದ್ರ, ಹರ್ಷ, ಎಂ.ಆರ್.ಮಂಜುನಾಥಗುಪ್ತ, ಎಂ.ಎಸ್. ರುದ್ರಸ್ವಾಮಿ, ಪ್ರಕಾಶ್, ನಾಗೇಂದ್ರ ಮೊದಲಾದವರು ಇದ್ದರು.



## ನಾಳೆ ಶರಣ ಪ್ರಶಸ್ತಿ ಪ್ರಧಾನ

ಮೈಸೂರು: ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ನಗರ ಘಟಕದ ವತಿಯಿಂದ ಡಿ. 27 ರ ಸಂಜೆ 5ಕ್ಕೆ ಜೆಎಸ್ಎಸ್ ಆಸ್ಪತ್ರೆ ಆವರಣದ ರಾಜೇಂದ್ರ ಭವನದಲ್ಲಿ ಶಕುಂತಲ ಜಯದೇವ ಶರಣ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ ಎಂದು ಅಧ್ಯಕ್ಷ ಡಾ. ಜಯಪ್ಪ ಹೊನ್ನಾಳಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು, ಡಾ.ಸಿ. ಸೋಮಶೇಖರ ಅಧ್ಯಕ್ಷತೆ ವಹಿಸುವರು, ಪ್ರೊ. ಪದ್ಮಾಶೇಖರ್, ಡಾ. ಶಕುಂತಲ ಜಯದೇವ ಉಪಸ್ಥಿತರಿರುವರು, ಡಾ. ನೀಲಾಂಬಿಕಾ ಪೊಲೀಸ್ ಪಾಟೀಲ. ಶಂಕರ ದೇವನೂರು ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದೆಂದರು. ಬಿ.ಎನ್. ನಂದೀಶ್ವರ, ಡಾ.ಎಚ್. ಮುದ್ದುಮಲ್ಲೇಶ್, ಮೈ.ನ. ಲೋಕೇಶ್, ಡಾ.ಎಚ್.ಎಸ್. ಲೋಕೇಶಪ್ಪ, ಶೋಭಾರಾಣಿ ಇದ್ದರು.



**ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಡಾ.ಬಿ.ಜೆ.ವಿಜಯಕುಮಾರ್ ಅಭಿಪ್ರಾಯ**

## ಸಂಕಷ್ಟದ ಕಾರ್ಯಕರ್ತಗೆ ತುರ್ತು ನಿಧಿ ಸ್ಥಾಪಿಸಲಿ

ಮೈಸೂರು: ಪಕ್ಷಕ್ಕಾಗಿ ದುಡಿದು ಸಂಕಷ್ಟದಲ್ಲಿರುವ ಕಾರ್ಯಕರ್ತರ ಆರ್ಥಿಕ ನೆರವಿಗೆ ನಿಲ್ಲುವ ನಿಟ್ಟಿನಲ್ಲಿ ಪಕ್ಷದಿಂದ ತುರ್ತು ನಿಧಿ ಸ್ಥಾಪಿಸಬೇಕಿದೆ ಎಂದು ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಡಾ.ಬಿ.ಜೆ.ವಿಜಯಕುಮಾರ್ ಅಭಿಪ್ರಾಯ ಪಟ್ಟರು.

ನಗರ ಹಾಗೂ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿವತಿಯಿಂದ ನಗರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಆರ್.ಮೂರ್ತಿ ಗೆ ಮೈಸೂರು ಕಾಂಗ್ರೆಸ್ ಸಾರಥಿಗೆ -74ರ ಹುಟ್ಟುಹಬ್ಬದ ಗೌರವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ರಾಷ್ಟ್ರೀಯ ಹಾಗೂ ಪ್ರಾದೇಶಿಕ ರಾಜಕೀಯ ಪಕ್ಷಗಳಲ್ಲಿ ಸುದೀರ್ಘವಾಗಿ ದುಡಿದ ಸಾಮಾನ್ಯ ಕಾರ್ಯಕರ್ತರು ಕೆಲವು ಸಂದರ್ಭಗಳಲ್ಲಿ ಮಾರಣಾಂತಿಕ ಕಾಯಿಲೆಗೆ ತುತ್ತಾಗಿ ಜೀವನ ಹಾಗೂ ಚಿಕಿತ್ಸಾ ವೆಚ್ಚಕ್ಕಾಗಿ ಪರಿತಪಿಸುತ್ತಾರೆ. ಅದಕ್ಕಾಗಿ ಎಲ್ಲಾ ರಾಜಕೀಯ ಪಕ್ಷಗಳು ತುರ್ತು ನಿಧಿ ಸ್ಥಾಪಿಸಿ ಸಂಬಂಧಿಸಿದ ತಮ್ಮ ಬಡ ಕಾರ್ಯಕರ್ತರಿಗೆ ಸಂಕಷ್ಟದ ಸಂದರ್ಭದಲ್ಲಿ ತುರ್ತು ನಿಧಿಯಿಂದ ನೆರವು ನೀಡಿದರೆ ಅಂತಹ ಕಾರ್ಯಕರ್ತರ ಬದುಕು ಸಾರ್ಥಕವೆನಿಸುತ್ತದೆ. ಇದು ದೇಶದ ಎಲ್ಲಾ ರಾಜಕೀಯ ಪಕ್ಷಗಳಿಗೆ ಅನ್ವಯವಾಗಲಿ ಎಂದರು.



ನಾವು ರಾಜಕೀಯ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡು ಪಕ್ಷದ ಸಿದ್ಧಾಂತಕ್ಕೆ ಅಂಟಿಕೊಂಡು ಬಹುತೇಕ ಜೀವನವನ್ನು ಪಕ್ಷಕ್ಕಾಗಿಯೇ ಕಳೆಯುತ್ತಿದ್ದೇವೆ. ನಮ್ಮ ಕುಟುಂಬ ಮತ್ತು ವೈಯಕ್ತಿಕ ಜೀವನಕ್ಕೆ ಸಮಯವನ್ನು ಕೊಡಲು ಸಾಧ್ಯವಾಗುತ್ತಿಲ್ಲ. ನಮ್ಮ ಆರೋಗ್ಯವನ್ನು ನೋಡಿಕೊಳ್ಳಲು ಸಾಧ್ಯವಾಗುತ್ತಿಲ್ಲ. ನಾವು ಬಹಳಷ್ಟು ಕಾಂಗ್ರೆಸ್ ಜನರನ್ನು ಕಳೆದುಕೊಂಡೆವು ಕಾಂಗ್ರೆಸ್ ಪಕ್ಷಕ್ಕೋಸ್ಕರ ತಮ್ಮ ಆರೋಗ್ಯವನ್ನೇ ಕಳೆದುಕೊಂಡಿದ್ದಾರೆ. ರಾಜಕಾರಣದಲ್ಲಿ ಜೀವನ ಕಟ್ಟಿಕೊಳ್ಳುವ ಮುನ್ನ ವೈಯಕ್ತಿಕ ಬದುಕನ್ನು ಕಟ್ಟಿಕೊಳ್ಳಿ ಎಂದರು.

ಮಾಜಿ ಮಂತ್ರಿ ಕೋಟೆ ಎಂ.ಶಿವಣ್ಣ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಕಾರ್ಯಕರ್ತರಿಗೆ ಶಾಸಕರು ಹಾಗೂ ಮಂತ್ರಿಗಳು ಮನ್ನಣೆ ನೀಡುತ್ತಿರುವುದು ಕಡಿಮೆಯಾಗುತ್ತಿದೆ. ಇದು ಮುಂದಿನ ದಿನಗಳಲ್ಲಿ ಪಕ್ಷದ ಬಲವರ್ಧನೆಗೆ ವ್ಯತಿರಿಕ್ತ ಪರಿಣಾಮ ಬೀರಲಿದೆ ಎಂದರು.

ಗೌರವ ಸ್ವೀಕರಿಸಿ ಮಾತನಾಡಿದ ಮೈಸೂರು ನಗರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಆರ್.ಮೂರ್ತಿ ಕಾಂಗ್ರೆಸ್ ಪಕ್ಷದಲ್ಲಿ ಸರ್ಕಾರ ನೀಡಿದ ಹುದ್ದೆಗಿಂತ ಪಕ್ಷ ನೀಡಿದ ಹುದ್ದೆಯೇ ಅತ್ಯಂತ ಶ್ರೇಷ್ಠ. ನಾನು ಕಾಂಗ್ರೆಸ್ ಪಕ್ಷದಲ್ಲಿ ಕಾಂಗ್ರೆಸ್ ಅಧ್ಯಕ್ಷರಾಗಿರುವುದು ನನಗೆ ಹೆಮ್ಮೆ . ನನ್ನ ಜೀವನದಲ್ಲಿ ಈ ಗೌರವ ಅತ್ಯಂತ ವಿಶೇಷ ಹಾಗೂ ಮರೆಯಲಾಗದ ಘಟನೆ ಎಂದರು. ಸಮಾರಂಭದಲ್ಲಿ ಅಶೋಕ್ ಪುರಂ ಪಿ ವಾಸು, ಮಾಜಿ ಮೇಯರ್ಗಳಾದ ಶ್ರೀ ಚಿಕ್ಕಣ್ಣ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಲತಾ ಚಿಕ್ಕಣ್ಣ, ಜಿಲ್ಲಾ ಒಬಿಸಿ ಘಟಕದ ಅಧ್ಯಕ್ಷ ನಾಗೇಶ್, ಈಶ್ವರ್ ಚಕ್ಕಡಿ, ಎಂ.ಕೆ. ಅಶೋಕ್, ಡೈರಿ ವೆಂಕಟೇಶ್, ಶಾಮ. ಯೋಗೇಶ್, ರಮೇಶ್, ವೆಂಕಟಸುಬ್ಬಯ್ಯ, ಗಿರೀಶ್, ಮಹೇಶ್, ಶಿವಶಂಕರ್ ಮೂರ್ತಿ, ಟಿಂಬರ್ ನಾಗರಾಜ್, ಮಾದೇವ, ಆಶಾ, ವನಜ, ಸುಭವಣಿ, ಮೋಹನ್ ಕುಮಾರಿ ಇನ್ನಿತರರು ಹಾಜರಿದ್ದರು.

# ಶುದ್ಧ-ಸುರಕ್ಷಿತ ಕುಡಿಯುವ ನೀರು ಸರಬರಾಜು ಮಾಡಲು ಆದ್ಯತೆ ನೀಡಿ: ಜಿ.ಪಂ. ಸಿಇಓ ಸೂಚನೆ





**ಮಂಡ್ಯ:** ಗ್ರಾಮಾಂತರ ಪ್ರದೇಶದಲ್ಲಿ ಸಾರ್ವಜನಿಕರಿಗೆ ಶುದ್ಧ ಮತ್ತು ಸುರಕ್ಷಿತ ಕುಡಿಯುವ ನೀರು ಸರಬರಾಜು ಮಾಡುವಂತೆ ಜಿ.ಪಂ. ಸಿಇಓ ನಂದಿನಿ ಕೆ.ಆರ್. ಅವರು ತಾ.ಪಂ. ಇಓ ಗಳು ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಭಿಯಂತರರುಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ನಡೆದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈಗಾಗಲೇ ಸೂಚಿಸಿರುವಂತೆ ಹೋಬಳಿ ಮಟ್ಟದಲ್ಲಿ ಗ್ರಾಮ ಪಂಚಾಯತ್ ನ ನೀರು ಗಂಟಿಗಳು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಭೆ ನಡೆಸಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಇರುವ ಸಮಸ್ಯೆಗಳ ಪಟ್ಟಿ ಮಾಡಿ ಅವುಗಳಿಗೆ ತೆಗೆದುಕೊಳ್ಳಲಾದ ಕ್ರಮಗಳ ಬಗ್ಗೆ ಮುಂದಿನ ಸಭೆಯಲ್ಲಿ ವರದಿ ಸಲ್ಲಿಸಲು ಸೂಚಿಸಿದರು.

ಬಹುಗ್ರಾಮ ಯೋಜನೆಗಳ ಕಾಮಗಾರಿಗಳನ್ನು ಪೂರ್ಣಗೊಳಿಸಿ: ಜಿಲ್ಲೆಯಾದ್ಯಂತ ಪ್ರಗತಿಯಲ್ಲಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಕಾಮಗಾರಿಗಳನ್ನು ಪೂರ್ಣಗೊಳಿಸಿ ಸಾರ್ವಜನಿಕರಿಗೆ ಶುದ್ಧ ನೀರು ಸರಬರಾಜು ಮಾಡಲು ಅಗತ್ಯ ಕ್ರಮ ವಹಿಸುವಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಭಿಯಂತರರುಗಳಿಗೆ ಸೂಚಿಸಿದರು.

ತಾ.ಪಂ. ಇಓ, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ತಾಲ್ಲೂಕು ಆರೋಗ್ಯಾಧಿಕಾರಿಗಳು ಜಂಟಿಯಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ಸಿಬ್ಬಂದಿಗಳೊಂದಿಗೆ ಸಭೆ ನಡೆಸಿ ಗ್ರಾ.ಪಂ. ವ್ಯಾಪ್ತಿಯ ಎಲ್ಲಾ ಕುಡಿಯುವ ನೀರಿನ ಮೂಲಗಳನ್ನು ರಾಸಾಯನಿಕ ಮತ್ತು ಮೈಕ್ರೋಬಯಾಲಜಿ ಪರೀಕ್ಷೆಗೆ ಒಳಪಡಿಸಿ ನೀರು ಶುದ್ಧವಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಿದರು.

ಕೊಳವೆ ಬಾವಿಗಳಿಗೆ ರಕ್ಷಣಾ ಕಾಮಗಾರಿಗಳನ್ನು ಪೂರ್ಣಗೊಳಿಸಿ: ಈಗಾಗಲೇ ಕೃಷ್ಣರಾಜಪೇಟೆ ತಾಲ್ಲೂಕಿನ ಎಲ್ಲಾ ಕೊಳವೆ ಬಾವಿಗಳಿಗೆ ರಕ್ಷಣಾ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದು, ಉಳಿದ ತಾಲ್ಲೂಕುಗಳು ಸಹ ಅದೇ ಮಾದರಿಯಲ್ಲಿ ರಕ್ಷಣಾ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಸೂಚಿಸಿದರು. ಇದರಿಂದ ಕೊಳವೆ ಬಾವಿಗಳು ಕಲುಷಿತಗೊಳ್ಳುವುದನ್ನು ತಡೆಗಟ್ಟಬಹುದು ಎಂದು ತಿಳಿಸಿದರು.

ಕೃಷ್ಣರಾಜಪೇಟೆ ಉಪವಿಭಾಗದ ಎಇಇ ರವರಿಗೆ ಪ್ರಶಂಸಾ ಪತ್ರ: ತಾಲ್ಲೂಕಿನ ಎಲ್ಲಾ ಕೊಳವೆ ಬಾವಿಗಳಿಗೆ ರಕ್ಷಣಾ ಕಾಮಗಾರಿಗಳನ್ನು ಪೂರ್ಣಗೊಳಿಸಲು ಶ್ರಮಿಸಿದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗದ ಎಇಇ ರಶ್ಮಿ ಆರ್ ಅವರಿಗೆ ಜಿ.ಪಂ. ಸಿಇಓ ನಂದಿನಿ ಕೆ.ಆರ್. ಅವರು ಪ್ರಶಂಸಾ ಪತ್ರ ನೀಡಿ ಗೌರವಿಸಿದರು.

ಶುದ್ಧ ಕುಡಿಯುವ ನೀರಿನ ಘಟಕಗಳ ದುರಸ್ತಿಗೆ ಕ್ರಮವಹಿಸಲು ಸೂಚನೆ: ಕಾರ್ಯಾಚರಣೆ ಮತ್ತು ನಿರ್ವಹಣೆಯ ಅವಧಿ ಮುಕ್ತಾಯವಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಒಂದು ಬಾರಿಗೆ ದುರಸ್ತಿ ಮಾಡಿ ಗ್ರಾ.ಪಂ.ಗಳಿಗೆ ಹಸ್ತಾಂತರ ಮಾಡುವಂತೆ ಸರ್ಕಾರವು ನಿರ್ದೇಶನ ನೀಡಿದ್ದು, ಅದರಂತೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಗ್ರಾ.ಪಂ.ಗೆ ಹಸ್ತಾಂತರ ಮಾಡಲಾಗಿದೆ. ಸದರಿ ಘಟಕಗಳನ್ನು ಗ್ರಾ.ಪಂ. ಗಳು ಸೂಕ್ತವಾಗಿ ನಿರ್ವಹಣೆ ಮಾಡುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಗ್ರಾ.ಪಂ.ಗಳಿಗೆ ಹಸ್ತಾಂತರ ಮಾಡಲು ಬಾಕಿ ಇರುವ ಘಟಕಗಳನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯು ಕಾರ್ಯಾಚರಣೆ ಮತ್ತು ನಿರ್ವಹಣೆಯ ಗುತ್ತಿಗೆ ಪಡೆದಿರುವ ಸಂಸ್ಥೆಯ ವತಿಯಿಂದಲೇ ನಿರ್ವಹಿಸಬೇಕೆಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ನ ಯೋಜನಾ ನಿರ್ದೇಶಕರಾದ ರೂಪಶ್ರೀ ಕೆ.ಎನ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರರಾದ ಪ್ರಮೋದ್ ಕುಮಾರ್ ಎನ್.ಜಿ, ಜಿಲ್ಲಾ ಕ್ಷಯ ರೋಗ ನಿರ್ಮೂಲನಾಧಿಕಾರಿ ಆಶಾಲತಾ ಸೇರಿದಂತೆ ಜಿಲ್ಲೆಯ ಎಲ್ಲಾ ತಾ.ಪಂ. ಇಓ ಗಳು, ಎಲ್ಲಾ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗಗಳ ಎಇಇ ಗಳು ಹಾಜರಿದ್ದರು.

## ಲೋಕೇಶ ಕೆ.ಆರ್‌ಗೆ ಪಿಹೆಚ್.ಡಿ ಪದವಿ



**ಮಂಡ್ಯ:** ತಾಲೂಕು ಎಸ್.ಐ ಕೋಡಿಹಳ್ಳಿ ಗ್ರಾಮದ ನಿವೃತ್ತ ಮುಖ್ಯೋಪಾಧ್ಯಾಯರಾದ ರಾಜು ರವರ ಮಗ ಲೋಕೇಶ ಕೆ.ಆರ್ ದೈಹಿಕ ಶಿಕ್ಷಣ ನಿರ್ದೇಶಕರು, ಮಹಿಳಾ ಸರ್ಕಾರಿ ಕಾಲೇಜು (ಸ್ವಯತ್ತ), ಮಂಡ್ಯ, ರವರು ಮೈಸೂರು ವಿಶ್ವವಿದ್ಯಾನಿಲಯದ ಡಾ. ಸಿ.ವೆಂಕಟೇಶ್, ಪ್ರೊಫೆಸರ್ ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗ ಮೈಸೂರು ವಿಶ್ವವಿದ್ಯಾನಿಲಯ ಇವರ ಮಾರ್ಗದರ್ಶನದಲ್ಲಿ ಮಂಡಿಸಿದ "A Study of Selected Anthropometrical, Motor Fitness and Psychological Variables as Predictors of Skill Performance of Universities Male Basketball Players" ಎಂಬ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯವು ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

## ಪತ್ರಕರ್ತ ಕೆ.ಟಿ.ಮೋಹನ್ ಕುಮಾರ್‌ಗೆ ಸನ್ಮಾನ



**ಕೆ.ಆರ್.ನಗರ:** ಪಟ್ಟಣದ ಗ್ರಾಮೀಣ ನಿಧಿ ಸೌಹಾರ್ದ ಕೋ ಆಪರೇಟಿವ್ ಸೊಸೈಟಿಯ ವತಿಯಿಂದ ಪತ್ರಕರ್ತ ಕೆ.ಟಿ.ಮೋಹನ್ ಕುಮಾರ್ ಅವರನ್ನು ಸನ್ಮಾನಿಸಲಾಯಿತು.

ಈ ಸಂಧರ್ಭದಲ್ಲಿ ಮೂಳೆ ತಜ್ಞ ವೈದ್ಯ ಡಾ.ಕೆ.ಆರ್. ಗೌತಮ್, ಸೊಸೈಟಿಯ ಅಧ್ಯಕ್ಷ ಕೆ.ಆರ್.ಶ್ಯಾಮಸುಂದರ್, ಉಪಾಧ್ಯಕ್ಷೆ ಭಾಗ್ಯ, ನಿರ್ದೇಶಕರುಗಳಾದ ಎಂ.ಎಸ್.ನರಸಿಂಹ, ಮಂಜುನಾಥ, ಶಶಿಕುಮಾರ್, ನೇತ್ರಾವತಿ, ಅಶ್ವಿನಿ, ಅವಿನಾಶ್, ಸಿಇಓ ಸಿಂಧೂ, ಸಿಬ್ಬಂದಿ ಮಮತಾ, ವಕೀಲ ಸ್ಪಿನ್ ಕೃಷ್ಣ, ಪತ್ರಕರ್ತ ಬಸವರಾಜು, ಮುಖಂಡರುಗಳಾದ ನವೀನ್, ಸುರೇಶ, ಗುರುರಾಜ್, ರೇಣುಕೇಶ್ ಸೇರಿದಂತೆ ಹಲವರು ಇದ್ದರು.

## ಡಿ. 27ರಂದು ವೈಚಾರಿಕ ಪ್ರಶಸ್ತಿ ಪ್ರದಾನ



**ಮಂಡ್ಯ:** ಪ್ರೊಫೆಸರ್ ಎಚ್.ಎಲ್.ಕೇಶವಮೂರ್ತಿ ಪ್ರತಿಷ್ಠಾನ ವತಿಯಿಂದ 8ನೇ ವರ್ಷದ ಪ್ರೊಫೆಸರ್ ಎಚ್ ಎಲ್ಕೆ ವೈಚಾರಿಕ ಪ್ರಶಸ್ತಿ ಪ್ರದಾನ ಸಮಾರಂಭ ಡಿಸೆಂಬರ್ 27ರಂದು ಬೆಳಿಗ್ಗೆ 10.30ಕ್ಕೆ ನಗರದ ಗಾಂಧಿಭವನದಲ್ಲಿ ನಡೆಯಲಿದೆ ಎಂದು ಪ್ರತಿಷ್ಠಾನದ ಕಾರ್ಯದರ್ಶಿ ರಾಜೇಂದ್ರಪ್ರಸಾದ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಎಚ್ ಎಲ್ ಕೇಶವಮೂರ್ತಿ ಪ್ರಶಸ್ತಿಯನ್ನು ಈ ಬಾರಿ ಮೈಸೂರು ರಂಗಾಯಣ ಕಲಾವಿದೆ ಬಿ.ಎನ್.ಶಶಿಕಲಾ ಅವರಿಗೆ ನೀಡಲಾಗುತ್ತಿದೆ. ಖ್ಯಾತ ಚಿಂತಕ ಡಾ.ಬಿ.ಸುಜಯಕುಮಾರ್ ಪ್ರಶಸ್ತಿ ಪ್ರದಾನ ಮಾಡುವರು ಎಂದು ಗುರುವಾರ ಸುದ್ದಿಗೋಷ್ಠಿಯಲ್ಲಿ ವಿವರಿಸಿದರು. ಪ್ರೊಫೆಸರ್ ಎಚ್ ಎಲ್ ಕೆ ಪ್ರಶಸ್ತಿ ಕುರಿತು ಕನ್ನಡ ಉಪನ್ಯಾಸಕ ಡಾ.ಅನಿತಾಮಂಗಲ ಮಾತನಾಡುವರು. ಪ್ರೊಫೆಸರ್ ಎಚ್.ಎಲ್.ಕೇಶವಮೂರ್ತಿ ಪ್ರತಿಷ್ಠಾನದ ಅಧ್ಯಕ್ಷ ಗುರುಪ್ರಸಾದ್ ಕೆರಗೋಡು ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.

ಗೋಷ್ಠಿಯಲ್ಲಿ ಪ್ರತಿಷ್ಠಾನದ ಕೆ.ಬೋರಯ್ಯ ಇದ್ದರು.

## ಡಿ. 28 ರಂದು ವಿವಿಧ ಸಾಂಸ್ಕೃತಿಕ ಸಂಸ್ಥೆಗಳಿಂದ ಅದ್ದೂರಿ ಕುವೆಂಪು ಜನ್ಮೋತ್ಸವ



**ಮಂಡ್ಯ:** ಕರ್ನಾಟಕ ಸಂಘದ ವತಿಯಿಂದ ರಾಷ್ಟ್ರಕವಿ ಕುವೆಂಪು ಅವರ ಹುಟ್ಟುಹಬ್ಬದ ಅಂಗವಾಗಿ ನಗರದ ವಿವೇಕಾನಂದ ರಂಗಮಂದಿರದಲ್ಲಿ ಡಿಸೆಂಬರ್ 28 ರಂದು ವಿವಿಧ ಸಾಂಸ್ಕೃತಿಕ ಸಂಸ್ಥೆಗಳು ಅದ್ದೂರಿ ಕುವೆಂಪು ಜನ್ಮೋತ್ಸವ ಸಂಭ್ರಮ ಹಮ್ಮಿಕೊಂಡಿವೆ ಎಂದು ಕರ್ನಾಟಕ ಸಂಘದ ಅಧ್ಯಕ್ಷ ಪ್ರೊಫೆಸರ್ ಬಿ.ಜಯಪ್ರಕಾಶ್‌ಗೌಡ ಹಾಗೂ ವಿಶ್ರಾಂತ ಪ್ರಾಂಶುಪಾಲ ಡಾ.ಎಸ್.ಬಿ.ಶಂಕರೇಗೌಡ ಜಂಟಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಡಿಸೆಂಬರ್ 28ರಂದು ಮಧ್ಯಾಹ್ನ 2.30ಕ್ಕೆ ಆರಂಭವಾಗಲಿರುವ ಕುವೆಂಪು ವಿಚಾರ ಸಂಕಿರಣದ ಅಧ್ಯಕ್ಷತೆಯನ್ನು ಆಂಧ್ರಪ್ರದೇಶದ ಆದಾಯ ತೆರಿಗೆ ಇಲಾಖೆಯ ಮುಖ್ಯ ಆಯುಕ್ತ ಜಯರಾಂ ರಾಯಪುರ ವಹಿಸುವರು. ಸಾಂಸ್ಕೃತಿಕ ಚಿಂತಕ ಪ್ರೊಪ್ರೊಫೆಸರ್ ಎಸ್.ಡಿ.ಸಿದ್ದರಾಮಯ್ಯ ವಿಚಾರ ಕ್ರಾಂತಿಗೆ ಆಹ್ವಾನ ಹಿನ್ನೆಲೆಯಲ್ಲಿ ನಿರಂಕುಶ ಮತಿತ್ವದ ಕುರಿತು ಮಾತನಾಡುವರು. ನಂತರ ಮತ್ತೊರ್ವ ಸಾಂಸ್ಕೃತಿಕ ಚಿಂತಕ ಚಂದ್ರಶೇಖರ್ ನಂಗಲಿ ಕುವೆಂಪು ಸಾಹಿತ್ಯ ಪ್ರವೇಶಕ್ಕೆ ಭೂಮಿಕೆಯ ಕುರಿತು ತಮ್ಮ ಒಳನೋಟ ಹಂಚಿಕೊಳ್ಳಲಿದ್ದಾರೆ ಎಂದು ಗುರುವಾರ ಸುದ್ದಿಗೋಷ್ಠಿಯಲ್ಲಿ ವಿವರಿಸಿದರು.

ಸಂಜೆ 6ಕ್ಕೆ ಬೆಂಗಳೂರಿನ ಮನೋಜ್ಞ ಕಲಾತಂಡದ ಡಾ.ಪಿ.ಮಾನಸ ನೇತೃತ್ವದ ತಂಡ ಕುವೆಂಪು ಅವರ ಜೀವನಾಧಾರಿತ ಕಾಡಿನ ಕೊಳಲು ನೃತ್ಯ ರೂಪಕ ಪ್ರಸ್ತುತಪಡಿಸಲಿದ್ದಾರೆ. ಆದಿಚುಂಚನಗಿರಿ ಪೀಠಾಧಿಪತಿ ಡಾ.ನಿರ್ಮಲಾನಂದನಾಥ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸುವರು. ವಿಶ್ವ ಮಾನವ ಕ್ಷೇತ್ರದ ಪುರುಷೋತ್ತಮನಂದನಾಥ ಸ್ವಾಮೀಜಿ ಸಾನಿಧ್ಯ ವಹಿಸುವರು. ಲಯನ್ಸ್ ಕ್ಲಬ್‌ನ ಮಾಜಿ ರಾಜ್ಯಪಾಲ ಲಯನ್ ಕೆ.ದೇವೇಗೌಡ ಅಧ್ಯಕ್ಷತೆ ವಹಿಸುವರು ಎಂದು ಹೇಳಿದರು.

ಡಿಸೆಂಬರ್ 26, 27ರಂದು ಪ್ರತಿದಿನ ಸಂಜೆ 5.45 ರಿಂದ 7.30ರವರೆಗೆ ಕುವೆಂಪುರವರ ಶ್ರೀ ರಾಮಾಯಣ ದರ್ಶನಂ ಗಮಕ ವ್ಯಾಖ್ಯಾನ ನಡೆಯಲಿದೆ. ವಿಶ್ರಾಂತ ಪ್ರಾಚಾರ್ಯ ಡಾ.ಮ. ರಾಮಕೃಷ್ಣ ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ಸಂಘದ ಕಾರ್ಯಾಧ್ಯಕ್ಷ ತಗ್ಗಹಳ್ಳಿ ವೆಂಕಟೇಶ್ ಅಧ್ಯಕ್ಷತೆ ವಹಿಸುವರು. ತುಮಕೂರಿನ ಲಕ್ಷ್ಮಿ ದೇವಪ್ರಕಾಶ್ ಮತ್ತು ವಾಗ್ದೇವಿ ಗಮಕ ಕಲಾ ಪ್ರತಿಷ್ಠಾನದಿಂದ ಕಾರ್ಯಕ್ರಮ ನಡೆಯಲಿದೆ. ಡಾ.ಶುಭಶ್ರೀ ಪ್ರಸಾದ್ ವ್ಯಾಖ್ಯಾನ ಮಾಡುವರು ಎಂದು ವಿವರಿಸಿದರು.

## ಮನೆ ಮೇಲೆ ಸೋಲಾರ್ ಸರ್ಕಾರಕ್ಕೆ ಲಾಭ

ನಮ್ಮ ಮನೆ ಮೇಲೆ ಸರ್ಕಾರ 3 ಕೆವಿ ಸೋಲಾರ್ ಫಲಕ ಹಾಕಿಸಿಕೊಟ್ಟು ನಮಗೆ 200 ಯೂನಿಟ್ ಪ್ರತಿ ತಿಂಗಳೂ ಪುಕ್ಕಟೆ ನೀಡಿದರೂ ಸರ್ಕಾರಕ್ಕೇ ಲಾಭ. ಹೇಗೆಂದರೆ ಮನೆ ಮೇಲೆ 3 ಕೆವಿ ಸೋಲಾರ್ ಫಲಕ ಅಳವಡಿಸಿ ನೆಟ್ ಮೀಟರ್ ಮೂಲಕ ಸರ್ಕಾರ ವಿದ್ಯುತ್ ಪಡೆದುಕೊಂಡರೆ ವರ್ಷಕ್ಕೆ 4500 ಯೂನಿಟ್ ಲಭಿಸುತ್ತದೆ. ಭಾಗ್ಯಜ್ಯೋತಿ ಯೋಜನೆಯಂತೆ ಪ್ರತಿ ತಿಂಗಳೂ 200 ಯೂನಿಟ್ ಉಚಿತ ವಿದ್ಯುತ್ ನೀಡಿದರೂ 2400 ಯೂನಿಟ್ ಮಾತ್ರ ವೆಚ್ಚವಾಗುತ್ತದೆ. ಉಳಿದ ಹೆಚ್ಚುವರಿ ವಿದ್ಯುತ್ ನಿಂದ ಸರ್ಕಾರಕ್ಕೆ ಲಾಭ.

ಈಗ ಕೇಂದ್ರ ಸರ್ಕಾರ ಮನೆ ಮೇಲೆ ಸೋಲಾರ್ ಫಲಕ ಅಳವಡಿಸಲು 78 ಸಾವಿರ ರೂ ವರೆಗೆ ಸಹಾಯಧನ ನೀಡುತ್ತದೆ. ಒಟ್ಟು ವೆಚ್ಚ 1.50ಲಕ್ಷ ರೂ. ಹಾಗೂ ಮನೆ ಮೇಲೆ 300 ಚ.ಮೀಟರ್ ಮುಕ್ತ ಸ್ಥಳ ಇದ್ದರೆ ಸಾಕು. ಉಳಿದ ಹಣವನ್ನು ಸರ್ಕಾರವೇ ಭರಿಸಿ ಗ್ರಾಹಕರಿಗೆ ಉಚಿತವಾಗಿ ಸೋಲಾರ್ ಫಲಕ ನೀಡಿ ಅದರಿಂದ ಬರುವ ವಿದ್ಯುತ್ತನ್ನು ತನೇ ಬಳಸಿಕೊಳ್ಳಬಹುದು. ಅಲ್ಲದೆ ಈಗಿರುವ 200 ಯೂನಿಟ್ ಉಚಿತ ಸೇವೆಯನ್ನು ಹಾಗೇ ಮುಂದುವರಿಸಬಹುದು. ಇದರ ಬಗ್ಗೆ ರಾಜ್ಯ ಸರ್ಕಾರ ಇನ್ನೂ ಚಿಂತನೆ ನಡೆಸಿಲ್ಲ. ರಾಜ್ಯ ಸರ್ಕಾರ 200 ಯೂನಿಟ್ ಪುಕ್ಕಟೆ ಕೊಡುವುದರಿಂದ ಜನಸಾಮಾನ್ಯರು ಸೋಲಾರ್ ಫಲಕ ಅಳವಡಿಸಿಕೊಳ್ಳಲು ಮುಂದೆ ಬರುತ್ತಿಲ್ಲ. ಉಚಿತ ವಿದ್ಯುತ್ ಸೇವೆಯನ್ನು ನಿಲ್ಲಿಸಲು ಬರುವುದಿಲ್ಲ. ಅದರಿಂದ ಈ ರೀತಿ ಕೇಂದ್ರದ ಸಹಾಯಧನ ಬಳಸಿಕೊಂಡು ಹೆಚ್ಚುವರಿ ವಿದ್ಯುತ್ ಪಡೆಯಬಹುದು. ಇದರೊಂದಿಗೆ ಸೋಲಾರ್ ವಾಟರ್ ಹೀಟರ್ ಬಳಸಿಕೊಂಡಲ್ಲಿ ಮತ್ತಷ್ಟು ವಿದ್ಯುತ್ ಇಳಿತಾಯ ಮಾಡಬಹುದು. ಒಂದು ಗೀಸರ್ ತಿಂಗಳಿಗೆ 150 ಯೂನಿಟ್ ಬಳಕೆ ಮಾಡಿಕೊಳ್ಳುತ್ತದೆ. ಸೋಲಾರ್ ವಾಟರ್ ಹೀಟರ್ ಅಳವಡಿಸಿಕೊಂಡಲ್ಲಿ ವಿದ್ಯುತ್ ಉಳಿತಾಯವಾಗುತ್ತದೆ. 100 ಲೀಟರ್‌ಗೆ 25 ಸಾವಿರರೂ, 500 ಲೀಟರ್‌ಗೆ 80 ಸಾವಿರ ರೂ. ವೆಚ್ಚವಾಗುತ್ತದೆ. ಇದಕ್ಕೆ 10 ಸಾವಿರರೂ. ನಿಂದ 30 ಸಾವಿರರೂ.ವರೆಗೆ ಸಹಾಯಧನ ಇದೆ. ಅದೇರೀತಿ ಸೋಲಾರ್ ಹಗಲು ಹೆಚ್ಚು ವಿದ್ಯುತ್ ಕೊಡುವುದರಿಂದ ಬ್ಯಾಟರಿ ವ್ಯವಸ್ಥೆ ಮಾಡಿಕೊಂಡಲ್ಲಿ ರಾತ್ರಿ ವೇಳೆ ವಿದ್ಯುತ್ ಕೊರತೆ ಇರುವುದಿಲ್ಲ. 1 ಕೆವಿ ಬ್ಯಾಟರಿಗೆ 45 ಸಾವಿರ ರೂ. 2 ಕೆವಿಗೆ 9 ಸಾವಿರ ರೂ.,3 ಕೆವಿ ಬ್ಯಾಟರಿಗೆ 1.35 ಲಕ್ಷರೂ. ಬೇಕು. ಇದಕ್ಕೂ 30 ಸಾವಿರ ದಿಂದ 78 ಸಾವಿರ ರೂ.ವರೆಗೆ ಸಹಾಯಧನ ಲಭ್ಯ. ರಾಜ್ಯ ಸರ್ಕಾರ ಮತ್ತು ಗ್ರಾಹಕರು ಇದನ್ನು ಬಳಸಿಕೊಂಡಲ್ಲಿ ವಿದ್ಯುತ್ ಉಳಿತಾಯ ಮಾಡುವುದಲ್ಲದೆ ಮುಂದಿನ ದಿನಗಳಲ್ಲಿ ವಿದ್ಯುತ್ ಬಿಲ್ ಕಡಿಮೆ ಮಾಡಿಕೊಳ್ಳಬಹುದು. ಈಗ ಕರ್ನಾಟಕದಲ್ಲಿ ಒಟ್ಟು 1.64 ಕೋಟಿ ಗ್ರಾಹಕರು ಪ್ರತಿ ತಿಂಗಳೂ 200 ಯೂನಿಟ್ ಪುಕ್ಕಟೆ ಪಡೆಯುತ್ತಿದ್ದು, ಇದಕ್ಕಾಗಿ ಬಜೆಟ್‌ನಲ್ಲಿ13 ಸಾವಿರ ಕೋಟಿ ರೂ. ಮೀಸಲಿಡಲಾಗಿದೆ. ಸೋಲಾರ್ ಬಳಸಿದರೆ ಇದನ್ನು ಕಡಿಮೆ ಮಾಡಬಹುದು. ಅಲ್ಲದೆ 2–3 ವರ್ಷಗಳಲ್ಲಿ ಸರ್ಕಾರ ವೆಚ್ಚ ಮಾಡಿದ ಹಣ ಹಿಂತಿರುಗಿ ಬಂದು ಮುಂದಿನ 20 ವರ್ಷ ಉಚಿತ ವಿದ್ಯುತ್ ಲಭಿಸಲಿದೆ. ಇದರ ಬಗ್ಗೆ ಚಿಂತನೆ ನಡೆದಿಲ್ಲ. ಇದಕ್ಕೆ ಕಾರಣವೂ ಇದೆ. ನಮ್ಮ ವಿದ್ಯುತ್ ಸರಬರಾಜು ರಾಜಕೀಯ ವಿಷಯವಾಗಿದೆ. ಈಗ ಮನೆ ಮೇಲೆ ಸೋಲಾರ್ ಫಲಕ ಅಳವಡಿಕೆ ಕೇಂದ್ರದ ಯೋಜನೆ. ಅದರಿಂದ ರಾಜ್ಯ ಸರ್ಕಾರಕ್ಕೆ ಅದರಲ್ಲಿ ಆಸಕ್ತಿ ಇಲ್ಲ. ರಾಜ್ಯ ಸರ್ಕಾರ ಪ್ರತಿ ಮನೆಗೆ 200 ಯೂನಿಟ್ ವಿದ್ಯುತ್





ಉಚಿತವಾಗಿ ನೀಡಿ ತನ್ನ ಮತ ಬ್ಯಾಂಕ್ ಕಾಪಾಡಿಕೊಳ್ಳಲು ಯೋಜಿಸಿದೆ. ಇದರಿಂದ ಒಟ್ಟಾರೆಯಾಗಿ ನಷ್ಟವಾಗುವುದು ಗ್ರಾಹಕರಿಗೆ. ಬೇರೆ ರಾಜ್ಯಗಳಲ್ಲಿ ಕೇಂದ್ರದ ಸಹಾಯಧನ ಸಂಪೂರ್ಣವಾಗಿ ಬಳಕೆಯಾಗುತ್ತಿದೆ. ನಮ್ಮಲ್ಲಿ ಮಾತ್ರ ಅದು ಲಭ್ಯವಿಲ್ಲ. ಕೇಂದ್ರದ ಯೋಜನೆ ಇದ್ದರೂ ಅದನ್ನು ಮುಟ್ಟಿಸುವ ಕೆಲಸವನ್ನು ರಾಜ್ಯ ಸರ್ಕಾರ ಕೈಗೊಳ್ಳುತ್ತಿಲ್ಲ. ಹೀಗಾಗಿ ಕೇಂದ್ರದ ಸಹಾಯಧನ ಬಳಕೆಯಾಗುತ್ತಿಲ್ಲ. ಎಲ್ಲ ರೀತಿಯ ಸೋಲಾರ್ ವಿದ್ಯುತ್ ಉತ್ಪಾದನೆ, ಬಳಕೆಗೆ ಕೇಂದ್ರದ ಸಹಾಯಧನ ಇದ್ದೇ ಇದೆ. ಇದರಿಂದ ಕಡಿಮೆ ದರದಲ್ಲಿ ಸೋಲಾರ್ ಪಡೆಯಬಹುದು. ಸೋಲಾರ್ ವಿದ್ಯುತ್ ಉತ್ಪಾದನೆಯೊಂದಿಗೆ ಬ್ಯಾಟರಿ ಮೂಲಕ ಅದನ್ನು ದಾಸ್ತಾನು ಮಾಡಿದರೆ ಅದಕ್ಕೂ ಸಹಾಯಧನ ಇದೆ. ರಾಜ್ಯ ಸರ್ಕಾರ ಎಲ್ಲ ವಿಷಯದಲ್ಲೂ ಕೇಂದ್ರ ಸರ್ಕಾರವನ್ನು ವಿರೋಧಿಸುವುದೇ ತನ್ನ ಕರ್ತವ್ಯ ಎಂದು ತಿಳಿದು ರಾಜಕೀಯ ಮಾಡುತ್ತಿದೆ.ಇದರಿಂದ ಜನರಿಗೆ ನ್ಯಾಯ ಸಿಗಬೇಕಾದ ಸಹಾಯಧನ ಬರುತ್ತಿಲ್ಲ. ರಾಜಕೀಯ ಬೇಧಭಾವ ಇದ್ದಲ್ಲಿ ಅದು ಚುನಾವಣೆಗೆ ಮಾತ್ರ ಸೀಮಿತಗೊಳ್ಳಬೇಕು. ಅಭಿವೃದ್ಧಿ ಕೆಲಸದಲ್ಲಿ ರಾಜಕೀಯ ಬರಬಾರದು. ಇದನ್ನು ಬಾಯಿ ಮಾತಿಗೆ ಹೇಳಿ ಒಳಗೆ ಅದಕ್ಕೆ ವಿರುದ್ಧ ಕೆಲಸ ಮಾಡುವುದು ಈಗ ನಡೆಯುತ್ತಿರುವ ವಿದ್ಯಮಾನ. ರೈತರಿಗೆ ಸೋಲಾರ್ ಪಂಪ್‌ಸೆಟ್ ಕೊಟ್ಟರೆ ನಮ್ಮ ಆಹಾರ ಉತ್ಪಾದನೆ ಅಧಿಕಗೊಳ್ಳುತ್ತದೆ. ಇದರ ಬಗ್ಗೆ ರಾಜ್ಯ ಸರ್ಕಾರಕ್ಕೆ ಆಸಕ್ತಿ ಇಲ್ಲ. ರಾಜ್ಯದಲ್ಲಿ 34 ಲಕ್ಷ ಪಂಪ್‌ಸೆಟ್‌ಗಳಿವೆ, ಇದರಲ್ಲಿ ಶೇ.50 ರಷ್ಟು ಪಂಪ್‌ಸೆಟ್‌ಗಳು ಸೋಲಾರ್ ಪರಿವರ್ತನೆಗೊಂಡಲ್ಲಿ ಮಹತ್ತರ ಬದಲಾವಣೆ ಬರುವುದು ಖಚಿತ. ಉತ್ತರ ಕರ್ನಾಟಕದಲ್ಲಿ ನದಿ ದಡದಿಂದ ನೇರವಾಗಿ ನೀರನ್ನು ಪಂಪ್ ಮಾಡುವ ಪರಿಪಾಠವಿದೆ. ಅಲ್ಲಿ ಸೋಲಾರ್ ಪಂಪ್‌ಸೆಟ್ ಅಳವಡಿಸಿದರೆ ಹಗಲು ಪಂಪ್‌ಸೆಟ್ ಉತ್ತಮವಾಗಿ ಕೆಲಸ ಮಾಡಬಹುದು. ಈಗ ವಿದ್ಯುತ್ ಮಾರ್ಗದ ಸಾಮರ್ಥ್ಯ ಕಡಿಮೆ ಇರುವುದರಿಂದ ಹಗಲು 2–4 ಗಂಟೆ ಸತತವಾಗಿ ವಿದ್ಯುತ್ ಕೊಡಬಹುದು. ಉಳಿದ ಸಮಯದಲ್ಲಿ ಸಿಂಗಲ್ ಫೇಸ್ ಮಾತ್ರ ಇರುತ್ತದೆ. ಇವೆಲ್ಲವನ್ನೂ ನೋಡಿದಾಗ ಸೋಲಾರ್ ಪಂಪ್‌ಸೆಟ್‌ಗಳು ರೈತರ ಬಡವರ ಬಂಧು ಆಗುವುದರಲ್ಲಿ ಸಂದೇಹವಿಲ್ಲ. ಅದೇರೀತಿ ಗೃಹ ಬಳಕೆಗೂ ಸಂಪೂರ್ಣವಾಗಿ ಸೋಲಾರ್ ಅಳವಡಿಕೆಯ ಹೊಸ ನಾಗರೀಕತೆ ಬೆಳೆಯಬೇಕಿದೆ. ಹಿಂದೆ ಜಲ ವಿದ್ಯುತ್ ನಮ್ಮ ಆರ್ಥಿಕ ಚಿತ್ರವನ್ನು ಬದಲಿಸಿತು. ಈಗ ಸೋಲಾರ್ ಮತ್ತು ಅಣು ವಿದ್ಯುತ್ ನಮ್ಮ ಬದುಕಿನ ದಿಕ್ಕನ್ನೇ ಬದಲಿಸಲಿದೆ. ಕಲ್ಲಿದ್ದಲು ಆಧರಿತ ವಿದ್ಯುತ್ ಉತ್ಪಾದನೆಯನ್ನು ಕೈಬಿಡುವುದು ಅನಿವಾರ್ಯ. ಅದೇರೀತಿ ಡೀಸೆಲ್ ಜನರೇಟರ್‌ಗಳನ್ನು ಕೈಬಿಡುವುದು ಅಗತ್ಯ. ಅದರಿಂದ ವಾಯು ಮಾಲಿನ್ಯ ತಪ್ಪಿಸಬಹುದು. ಡೀಸೆಲ್ ಬಳಕೆ ಕಡಿಮೆಯಾದಷ್ಟೂ ನಮ್ಮ ಆರೋಗ್ಯ ಸುಧಾರಿಸಲಿದೆ. ಈಗ ಎಲ್ಲ ಕಡೆ ಪರಿಶುದ್ಧ ವಿದ್ಯುತ್ ಬಳಸುವ ಬಗ್ಗೆ ಜನರಿಗೆ ಜಾಗೃತಿ ಮೂಡಿದೆ. ಹಣಕಾಸಿನ ಚಿಂತನೆಗಿಂತ ಪರಿಸರ ರಕ್ಷಣೆ ಎಂಬ ಭಾವನೆ ಮೂಡಿದೆ. ಇದನ್ನು ತಿಳಿದುಕೊಂಡು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ಒಂದುಗೂಡಿಕೆಲಸ ಮಾಡಿದರೆ ಸಂಪೂರ್ಣವಾಗಿ ಪರಿಸರ ಮಾಲಿನ್ಯವನ್ನು ಶೂನ್ಯಕ್ಕೆ ತರಬಹುದು. ಪರಿಶುದ್ಧ ಗಾಳಿಯಿಂದ ಜನರ ಜೀವಿತಾವಧಿ ಅಧಿಕಗೊಳ್ಳುತ್ತದೆ. ವಾಯು ಮಾಲಿನ್ಯ ಜನರ ಜೀವಕ್ಕೆ ಅಪಾಯ ತಂದುಕೊಡುವುದರಿಂದ ಅದನ್ನು ಮೊದಲು ತಡೆಗಟ್ಟಬಹುದು. ಎಲ್ಲಿ ಪರಿಶುದ್ಧ ವಿದ್ಯುತ್ ಬಳಕೆ ಅಧಿಕಗೊಂಡಿದೆಯೋ ಅಲ್ಲಿ ಜೀವತಾವಧಿ ಅಧಿಕಗೊಂಡಿದೆ. ಮೆಟ್ರೋ ರೈಲು, ಬಸ್ ಬಳಸಿದರೆ ನಗರದಲ್ಲಿ ಪರಿಸರ ಮಾಲಿನ್ಯವನ್ನು ತಡೆಗಟ್ಟಬಹುದು. ದೆಹಲಿಗೆ ಬೆಂಗಳೂರು ಆದರ್ಶವಾಗಿ ಕಂಡರೆ ಆಶ್ಚರ್ಯವೇನೂ ಇಲ್ಲ. ವ್ಯಕ್ತಿಗಳು ಹೆಚ್ಚು ಸೋಲಾರ್ ವಾಹನಗಳನ್ನು ಬಳಸುವಂತೆ ಮಾಡಿದರೆ ಪರಿಸರ ಮಾಲಿನ್ಯ ಇಳಿಯುವುದರಲ್ಲಿ ಸಂದೇಹವಿಲ್ಲ.ಈಗ ಚಳಿಗಾಲದಲ್ಲೂ ಸೋಲಾರ್ ಫಲಕ ಕೆಲಸ ಮಾಡಲಿದೆ ಎಂದು ತಜ್ಞರು ತಿಳಿಸಿದ್ದಾರೆ. ಎಲ್ಲ ಕಡೆ ಹಿಮ ಬೀಳಲು ಆರಂಭಿಸಿದೆ. ಆದರೆ ಎಲ್ಲೂ ಸೋಲಾರ್ ಫಲಕ ಕೆಲಸ ಮಾಡುವುದನ್ನು ನಿಲ್ಲಿಸಿಲ್ಲ.ಇದರಿಂದ ಸೋಲಾರ್ ಫಲಕ ಎಲ್ಲ ಕಾಲದಲ್ಲೂ ಕೆಲಸ ಮಾಡಲಿದೆ ಎಂಬುದು ಸ್ಪಷ್ಟ. ಎಲ್ಲ ಕಡೆ ಸೋಲಾರ್ ಫಲಕ ತಯಾರಿಕೆ ಆರಂಭಗೊಂಡಿವೆ.ಬೆಂಗಳೂರಿನಲ್ಲೇ ಈಗ ಇವುಗಳ ಕಾರ್ಖಾನೆ ಕೆಲಸ ಮಾಡುತ್ತಿದೆ. 2030 ರೊಳಗೆ ಸೋಲಾರ್ ವಿದ್ಯುತ್ ಎಲ್ಲ ವಿದ್ಯುತ್ ಮೂಲಗಳಿಗಿಂತ ಮುಂಚೂಣಿಯಲ್ಲಿರುವುದಂತೂ ಖಚಿತ. ಸೋಲಾರ್ ಜತೆ ಅಣು ವಿದ್ಯುತ್ ಉತ್ಪಾದನೆಗೆ ಕೇಂದ್ರ ವೇಗದ ಹೆಜ್ಜೆಗಳನ್ನಿಡುತ್ತಿದ್ದು, ಮುಂಬರುವ ದಿನಗಳಲ್ಲಿ ಸೋಲಾರ್ ಮತ್ತು ಅಣು ವಿದ್ಯುತ್ ಪ್ರಾಬಲ್ಯಕ್ಕೆ ಬರಲಿದೆ.

## ಅಕ್ಕನ ಬುತ್ತಿ ಅಡುಗೆ ತಯಾರಿಕಾ ಕೇಂದ್ರದ ಪ್ರಚಾರ ಕಾರ್ಯಕ್ರಮಕ್ಕೆ ಜಿ.ಪಂ. ಸಿಇಓ ಚಾಲನೆ



ಮಂಡ್ಯ: ಸರ್ಕಾರಿ ಕಚೇರಿ, ಖಾಸಗಿ ಕಚೇರಿ, ಬ್ಯಾಂಕ್ ಗಳು ಮತ್ತು ಇನ್ನಿತರೆ ಸಂಸ್ಥೆಗಳಿಗೆ ಸ್ವ-ಸಹಾಯ ಸಂಘದಿಂದ ತಯಾರಿಸಿದ ಶುಚಿ, ರುಚಿಯಾದ, ರಾಸಾಯನಿಕ ಮುಕ್ತವಾದ, ಪೌಷ್ಠಿಕಾಂಶಯುಕ್ತ ಆಹಾರದ ಡಬ್ಬಿಗಳನ್ನು ತಲುಪಿಸಲು ಪ್ರಾರಂಭಿಸಲಾಗುತ್ತಿರುವ ?ಅಕ್ಕನ ಬುತ್ತಿ? ಆಹಾರ ತಯಾರಿಕಾ ಕೇಂದ್ರ (ಕ್ಲೌಡ್ ಕಿಚನ್)ದ ಪ್ರಚಾರ ಕಾರ್ಯಕ್ಕೆ ಜಿ.ಪಂ. ಸಿಇಓ ನಂದಿನಿ ಕೆ.ಆರ್. ಅವರು ಚಾಲನೆ ನೀಡಿದರು.

ಬುಧವಾರ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಜಿಲ್ಲಾ ಪಂಚಾಯತ್ ಕಚೇರಿಯ ಎಲ್ಲಾ ಶಾಖಾ ಮುಖ್ಯಸ್ಥರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳ ಸಮ್ಮುಖದಲ್ಲಿ ಆಹಾರ ತಯಾರಿಕಾ ಕೇಂದ್ರದ ಕರಪತ್ರಗಳನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು ಬೇವಿನಹಳ್ಳಿ ಗ್ರಾಮ ಪಂಚಾಯತ್ ಮಟ್ಟದ ಸಂಜೀವಿನಿ ಒಕ್ಕೂಟದ ವಿನೂತನ ಪ್ರಯತ್ನವನ್ನು ಶ್ಲಾಘಿಸಿದರು.

ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ಸ್ವ–ಸಹಾಯ ಸಂಘದ ಮೂಲಕ ಕಚೇರಿಗಳಿಗೆ ಆಹಾರದ ಡಬ್ಬಿಗಳನ್ನು ತಲುಪಿಸುವ ಕಾರ್ಯಕ್ರಮ ರೂಪಿಸಲಾಗಿದ್ದು, ಒಕ್ಕೂಟದ ಪ್ರಯತ್ನ ಯಶಸ್ವಿಯಾಗಲೆಂದು ಶುಭ ಕೋರಿದರು.

ಪ್ರತಿ ದಿನವೂ ವಿಭಿನ್ನ ಮೆನು: ವಾರದ ಆರು ದಿನವೂ ಮಧ್ಯಾಹ್ನದ ಊಟ ಲಭ್ಯವಿರಲಿದ್ದು, ಪ್ರತಿ ದಿನ ವಿಭಿನ್ನ ರೀತಿಯ ಆಹಾರವನ್ನು ನೀಡಲಾಗುತ್ತದೆ ಎಂದು ಸ್ವ-ಸಹಾಯ ಸಂಘದ ಮಹಿಳೆ ಸುಧಾಮಣಿ ಅವರು ತಿಳಿಸಿದರು. ಮೊಬೈಲ್ ನಂಬರ್ ಒತ್ತಿ, ಬರಲಿದೆ ನಿಮ್ಮ ಕಚೇರಿಗೆ ಬುತ್ತಿ ಎಂಬ ಘೋಷ ವಾಕ್ಯದೊಂದಿಗೆ ?ಅಕ್ಕನ ಬುತ್ತಿ? ಆಹಾರ ತಯಾರಿಕಾ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಉತ್ತಮ ಗುಣಮಟ್ಟದ ಆಹಾರವನ್ನು ಕಚೇರಿಗಳಿಗೆ ಒದಗಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಸೇರಿದಂತೆ ಇತರೆ ಕಚೇರಿಗಳಲ್ಲಿ ನಡೆಯುವ ಸಭೆಗಳಿಗೂ ಸ್ವ–ಸಹಾಯ ಸಂಘಗಳಿಂದ ಮಧ್ಯಾಹ್ನದ ಉಪಾಹಾರ, ಕಾಫಿ, ಟೀ ಸರಬರಾಜು ಪಡೆಯುವ ಬಗ್ಗೆ ಕ್ರಮವಹಿಸಲಾಗುತ್ತಿದೆ. ಎಲ್ಲಾ ತಾ.ಪಂ. ಇಓ ಗಳು ಈ ನಿಟ್ಟಿನಲ್ಲಿ ಯೋಜನೆ ರೂಪಿಸಬೇಕು ಎಂದು ಜಿ.ಪಂ. ಸಿಇಓ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ನ ಯೋಜನಾ ನಿರ್ದೇಶಕರಾದ ರೂಪಶ್ರೀ ಕೆ.ಎನ್, ಉಪಕಾರ್ಯದರ್ಶಿ (ಅಭಿವೃದ್ಧಿ) ಲಕ್ಷ್ಮಿ ಪಿ, ಉಪಕಾರ್ಯದರ್ಶಿ (ಆಡಳಿತ) ಶಿವಲಿಂಗಯ್ಯ, ಮುಖ್ಯ ಯೋಜನಾಧಿಕಾರಿ ಧನುಷ್ ಸೇರಿದಂತೆ ಜಿಲ್ಲೆಯ ಎಲ್ಲಾ ತಾ.ಪಂ. ಇಓಗಳು ಹಾಜರಿದ್ದರು.

## ಮೈ ಷುಗರ್ ಅಧ್ಯಕ್ಷರಿಂದ ದುರುದ್ದೇಶಪೂರಿತ ದೂರು ದಾಖಲು: ಕ್ರಮಕ್ಕೆ ಶಿವಕುಮಾರ್ ಆಗ್ರಹ



**ಮಂಡ್ಯ:** ಮೈ ಷುಗರ್ ಕಾರ್ಖಾನೆ 100 ವರ್ಷ ತುಂಬುತ್ತಿರುವ ರಾಜ್ಯ ಸರ್ಕಾರದ ಏಕೈಕ ಕಾರ್ಖಾನೆಯಾಗಿದ್ದು ಅದನ್ನು ಉಳಿಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿರುತ್ತದೆ. ಆದಕಾರಣ ಮಾಹಿತಿ ಹಕ್ಕು ಅಧಿನಿಯಮ ಪ್ರಕಾರ ದಾಖಲಾತಿ ಪಡೆದುಕೊಂಡು ಕಾರ್ಖಾನೆಯ ಅಧ್ಯಕ್ಷರ ಅವ್ಯವಹಾರಗಳ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದ ಕಾರಣ ಮೈ ಷುಗರ್ ಅಧ್ಯಕ್ಷರು ತಮ್ಮ ವಿರುದ್ಧ ದುರುದ್ದೇಶಪೂರಿತ ದೂರು ದಾಖಲಿಸಿದ್ದಾರೆ ಎಂದು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ 2025–26 ನೇ ಸಾಲಿನಲ್ಲಿ ಸಕ್ಕರೆ ಕಂಪನಿ ಅಧ್ಯಕ್ಷರು 4,50,000 ಲಕ್ಷ ಟನ್ ಕಬ್ಬನ್ನು ಅರೆಯುವುದಾಗಿ ಕೇವಲ 1,19,180 ಟನ್ ಅರೆಯುವುದಕ್ಕೆ ಸುಸ್ತಾಗಿದೆ. ರೈತರು ಸಾಗಾಣಿಕೆ ಮಾಡಿದ ಕಬ್ಬಿಗೆ ಹಣವನ್ನು ಬಿಡುಗಡೆ ಮಾಡಿಲ್ಲ ಎಂದು ಆರೋಪಿಸಿದರು.

ಸರ್ಕಾರದ ನೌಕರರ ಆದೇಶದ ಮೀಸಲಾತಿ ಪಟ್ಟಿಯ ನಿಯಮ ಪಾಲಿಸದೆ ಅಧ್ಯಕ್ಷರ ಟಿಪ್ಪಣಿ ಮೇರೆಗೆ ನೌಕರಿ ನೇಮಕಾತಿ ಮಾಡಿರುವುದು ಎಷ್ಟರ ಮಟ್ಟಿಗೆ ಸರಿ.ಇವರು ಕಾಂಗ್ರೆಸ್ ಪದಾಧಿಕಾರಿಗಳನ್ನು ನೇಮಕ ಮಾಡುವಂತೆ ಕಾರ್ಖಾನೆಗೆ ನೌಕರರನ್ನು ನೇಮಕ ಮಾಡಿಕೊಳ್ಳುತ್ತಿದ್ದಾರೆ ಎಂದು ಆರೋಪಿಸಿದರು.

ಕಂಪನಿಯ ಮುಖ್ಯ ಆಡಳಿತಾಧಿಕಾರಿ ಮನುಜಶ್ರೀ ವೈ.ಸಿ. ರವರು ಕಂಪನಿಯ ಅಧ್ಯಕ್ಷರು ನಮಗೆ ಮಾನಸಿಕ ಹಿಂಸೆ ನೀಡುತ್ತಿದ್ದಾರೆಂದು ಮಹಿಳಾ ಆಯೋಗಕ್ಕೆ ದೂರು ಸಲ್ಲಿಸಿರುವುದೇ ಇವರ ಅವ್ಯವಹಾರಕ್ಕೆ ಸಾಕ್ಷಿಯಾಗಿದೆ ಎಂದರು.

ಮಲಾಸಸ್ (ಕಾಕಂಬಿ) ಟ್ಯಾಂಕ್ ಹೊಡೆದು ಸುಮಾರು ಅಂದಾಜು 1200 ಟನ್‌ಗಿಂತ ಅಧಿಕ ಸೋರಿಕೆಯಾಗಿ ಆಗಿ ಕೋಟ್ಯಾಂತರ ರೂಪಾಯಿ ನಷ್ಟ ಉಂಟಾಗಿದ್ದರೂ ಈ ಬಗ್ಗೆ ತಪ್ಪು ಮಾಹಿತಿ ನೀಡಿದ್ದಾರೆ. ಈ ಸಂಬಂಧ ಪಾಪಣ್ಣ, ಅಪ್ಪಾಸಾಹೇಬ್ ಪಾಟೀಲ್ ಇನ್ನಿತರರಿಗೆ ವ್ಯವಸ್ಥಾಪಕ ನಿರ್ದೇಶಕರು ಕಾರಣ ಕೇಳಿ ನೋಟಿಸ್ ನೀಡುವ ಅಗತ್ಯವೇನಿತ್ತು ಎಂದು ಪ್ರಶ್ನಿಸಿದರು.

ಗೋಷ್ಠಿಯಲ್ಲಿ ನಗರಸಭಾ ಮಾಜಿ ಸದಸ್ಯ ಪ್ರಸನ್ನಕುಮಾರ್,ಮುಖಂಡರಾದ ಮನುಕುಮಾರ್, ದೀಪಕ್, ಸುನಿಲ್,ಶಿವಲಿಂಗು ಹಾಜರಿದ್ದರು.





ಸಿನಿಮಾ ವರದಿ: ಬಿ.ಜಿ.ರವಿಕುಮಾರ್

ಸಿನಿಮಾ
ವರ್ತಮಾನ



# ವಿಜಯ್ ದೇವರಕೊಂಡ ಚಿತ್ರ 'SVC 59' : ಟೈಟಲ್ ಗ್ಲಿಂಪ್ಸ್ ಬಿಡುಗಡೆ





ಸತತ ಯಶಸ್ವಿ ಚಿತ್ರಗಳನ್ನು ನೀಡುತ್ತಿರುವ ಪ್ರತಿಷ್ಠಿತ ಸಂಸ್ಥೆ 'ಶ್ರೀ ವೆಂಕಟೇಶ್ವರ ಕ್ರಿಯೇಷನ್ಸ್' ಬ್ಯಾನರ್ ಅಡಿಯಲ್ಲಿ, ಸ್ಟಾರ್ ಹಿರೋ ವಿಜಯ್ ದೇವರಕೊಂಡ ನಟನೆಯ ಹೊಸ ಚಿತ್ರ 'SVC 59' ಅನೌನ್ಸ್ ಆಗಿದೆ.

ನಿರ್ಮಾಪಕರಾದ ದಿಲ್ ರಾಜು ಮತ್ತು ಶಿರೀಶ್ ಈ ಚಿತ್ರವನ್ನು ಅದ್ದೂರಿಯಾಗಿ ನಿರ್ಮಿಸುತ್ತಿದ್ದಾರೆ. ಇದೀಗ ಇದೇ ಚಿತ್ರದ ಟೈಟಲ್ ಗ್ಲಿಂಪ್ಸ್ ಡಿಸೆಂ22 ರಂದು ಸಂಜೆ 07:29 ಕ್ಕೆ ರಿಲೀಸ್ ಆಗಿದೆ.

'ರಾಜ ವಾರು ರಾಣಿ ಗಾರು' ಚಿತ್ರದ ನಿರ್ದೇಶಕ ರವಿ ಕಿರಣ್ ಕೋಲಾ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳುತ್ತಿದ್ದಾರೆ. ಇತ್ತೀಚೆಗಷ್ಟೇ ಬಿಡುಗಡೆಯಾದ ಪ್ರೋಮೋ ಮೂಲಕ ಚಿತ್ರದ ನಾಯಕನ ವ್ಯಕ್ತಿತ್ವದ ಬಗ್ಗೆ ನಿರ್ದೇಶಕರು ಕುತೂಹಲಕಾರಿ ಸಂಗತಿಗಳನ್ನು ಹಂಚಿಕೊಂಡಿದ್ದಾರೆ.

ಚಿತ್ರದ ಬಗ್ಗೆ ಮಾಹಿತಿ ನೀಡುವ ನಿರ್ದೇಶಕ ರವಿ ಕಿರಣ್ ಕೋಲಾ, "ಒಬ್ಬ ವ್ಯಕ್ತಿಯ ಬಗ್ಗೆ ಕಥೆ ಹೇಳಲು ನಾನು ಬಹಳ ದಿನಗಳಿಂದ ಕಾಯುತ್ತಿದ್ದೆ. ಆ ಪಾತ್ರ ನನ್ನ ನೆನಪಿನಲ್ಲೇ ಇತ್ತು. ಅವನು ನನಗೆ ಬಹಳ ವೈಯಕ್ತಿಕ, ಅವನನ್ನು ನೋಡುತ್ತಲೇ ನಾನು ಬೆಳೆದಿದ್ದೇನೆ. ಅವನು ಪರಿಪೂರ್ಣನಲ್ಲ, ಆದರೆ ವಾಸ್ತವಕ್ಕೆ ಹತ್ತಿರವಾಗಿದ್ದಾನೆ. ದೋಷಗಳುಳ್ಳವನು, ಕೋಪಿಷ್ಟ ಮತ್ತು ಘಾಸಿಗೊಳಗಾದವನು. ಅವನನ್ನು ದ್ವೇಷಿಸುವುದಕ್ಕಿಂತ ಹೆಚ್ಚಾಗಿ ನಾನು ಪ್ರೀತಿಸಿದ್ದೇನೆ. ಈ ಕಥೆಯನ್ನು ಹೇಳಲೇಬೇಕಿತ್ತು, ಶೀಘ್ರದಲ್ಲೇ ನೀವು ಅವನನ್ನು ಭೇಟಿಯಾಗಲಿದ್ದೀರಿ," ಎಂದು ಪಾತ್ರದ ತೀವ್ರತೆಯನ್ನು ವಿವರಿಸಿದ್ದಾರೆ.

ಹಳ್ಳಿ ಬ್ಯಾಕ್‌ಡ್ರಾಪ್‌ನಲ್ಲಿ ಮಾಸ್ ಆಕ್ಷನ್ ಡ್ರಾಮಾ ಶೈಲಿಯಲ್ಲಿ ಈ ಸಿನಿಮಾ ಸಿದ್ಧಗೊಳಲಿದ್ದು, ಈ ಚಿತ್ರವನ್ನು ಪ್ಯಾನ್ ಇಂಡಿಯಾ ನಿರ್ಮಾಪಕರು ತೆರೆಗೆ ತರಲಿದ್ದಾರೆ. ನಾಯಕನಾಗಿ ವಿಜಯ್ ದೇವರಕೊಂಡ ನಟಿಸಲಿದ್ದಾರೆ. ಅವರ ಜೊತೆಗೆ ರಾಷ್ಟ್ರ ಪ್ರಶಸ್ತಿ ವಿಜೇತ ನಟಿ ಕೀರ್ತಿ ಸುರೇಶ್ ಮುಖ್ಯ ಭೂಮಿಕೆಯಲ್ಲಿ ಕಾಣಿಸಿಕೊಳ್ಳಲಿದ್ದಾರೆ.

ಸದ್ಯ 'SVC 59' ಚಿತ್ರದ ಕಿರು ಪ್ರೋಮೋ ಝಲಕ್ ಹೊರಬಿದ್ದಿದ್ದು, ಅಂತ್ಯದಲ್ಲಿ ರಕ್ತ ಮೆತ್ತಿದ ವಿಜಯ್ ದೇವರಕೊಂಡ ಅವರ ಕೈ ಮಾತ್ರ ಕಾಣಿಸಿಕೊಂಡಿದ್ದು, ಪ್ರೇಕ್ಷಕರಲ್ಲಿ ಭಾರೀ ಕುತೂಹಲ ಮೂಡಿಸಿದೆ. ಶೀಘ್ರದಲ್ಲೇ ಚಿತ್ರದ ಚಿತ್ರೀಕರಣ ಆರಂಭವಾಗಲಿದೆ. ಶ್ರೀ ವೆಂಕಟೇಶ್ವರ ಕ್ರಿಯೇಷನ್ಸ್ ಬ್ಯಾನರ್‌ನಲ್ಲಿ ಈ ಸಿನಿಮಾ ನಿರ್ಮಾಣವಾಗಲಿದ್ದು, ದಿಲ್ ರಾಜು, ಶಿರೀಶ್ ಈ ಚಿತ್ರದ ನಿರ್ಮಾಪಕರು. ಕಥೆ ಮತ್ತು ನಿರ್ದೇಶನ ರವಿ ಕಿರಣ್ ಕೋಲಾ ಅವರದ್ದು.

# ಡಿ.25ಕ್ಕೆ ಬಿಡುಗಡೆ ಮಲ್ಟಿಸ್ಟಾರರ್ "45"



ಶಿವರಾಜಕುಮಾರ್, ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಪ್ರಮುಖಪಾತ್ರದಲ್ಲಿ ನಟಿಸಿರುವ, ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಚೊಚ್ಚಲ ನಿರ್ದೇಶನದ ಹಾಗೂ ಎಂ. ರಮೇಶ್ ರೆಡ್ಡಿ ಅವರು ತಮ್ಮ ಸೂರಜ್ ಪ್ರೊಡಕ್ಷನ್ ಬ್ಯಾನರ್ ನಲ್ಲಿ ನಿರ್ಮಿಸಿರುವ ಮಲ್ಟಿಸ್ಟಾರರ್ ?45? ಚಿತ್ರ ಇದೇ ಡಿಸೆಂ25 ರಂದು ರಾಜ್ಯಾದ್ಯಂತ ಬಿಡುಗಡೆಯಾಗಿದೆ. ಇತ್ತೀಚೆಗಷ್ಟೇ ಚಿತ್ರದ ಟ್ರೇಲರ್ ಸಹ ಬಿಡುಗಡೆಯಾಗಿದ್ದು, ನಿರೀಕ್ಷೆಗೂ ಮೀರಿ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಈ ಖುಷಿಯನ್ನು ಹಂಚಿಕೊಳ್ಳಲು ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಚಿತ್ರತಂಡದ ಸದಸ್ಯರು ಮಾತನಾಡಿದರು.

ಇತ್ತೀಚೆಗಷ್ಟೇ ನಮ್ಮ ಚಿತ್ರದ ಟ್ರೇಲರ್ ಕನ್ನಡ ಸೇರಿದಂತೆ ಐದು ಭಾಷೆಗಳಲ್ಲಿ ಬಿಡುಗಡೆಯಾಗಿದ್ದು, ಎಲ್ಲಾ ಕಡೆಗಳಿಂದಲೂ ಅಪಾರ ಮೆಚ್ಚುಗೆ ವ್ಯಕ್ತವಾಗುತ್ತಿದೆ. ಹಾಡುಗಳಿಗೂ ಜನರು ಮನ ಸೋತಿದ್ದಾರೆ. ನಮ್ಮ ಚಿತ್ರಕ್ಕೆ ಆರಂಭದಿಂದಲೂ ಪ್ರೋತ್ಸಾಹ ನೀಡುತ್ತಾ ಬಂದಿರುವ ಎಲ್ಲರಿಗೂ ಧನ್ಯವಾದ. ನಾನು ಸಿನಿಮಾ ನೋಡಿದ್ದೇನೆ. ನಿರ್ಮಾಪಕನಾಗಿ ನನಗೆ ಬಹಳ ಸಂತೋಷವಾಗಿದೆ. ನಮ್ಮ ಚಿತ್ರ ಎಲ್ಲರಿಗೂ ಮೆಚ್ಚುಗೆಯಾಗಲಿದೆ. ಚಿತ್ರ ಬಿಡುಗಡೆಯಾಗುತ್ತಿರುವ ಈ ಸಮಯದಲ್ಲಿ ಉತ್ತಮವಾಗಿ ಮೂಡಿಬರಲು ಸಹಕಾರ ನೀಡಿದ್ದ ಪ್ರತಿಯೊಬ್ಬರಿಗೂ ನನ್ನ ಧನ್ಯವಾದ. ಶಿವರಾಜಕುಮಾರ್ ಅವರಿಗೆ ವಿಶೇಷ ಧನ್ಯವಾದ ಹೇಳಬೇಕು. ಅವರಿಗೆ ಆರೋಗ್ಯದ ಸಮಸ್ಯೆ ಇದ್ದರೂ ಚಿತ್ರಕ್ಕೆ ತೊಂದರೆ ಆಗಬಾರದೆಂದು ತಮ್ಮ ಕೆಲಸಗಳನ್ನು ಪೂರೈಸಿ ಚಿಕಿತ್ಸೆಗಾಗಿ ವಿದೇಶಕ್ಕೆ ತೆರಳಿದರು. ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಅವರ ಸಹಕಾರ ಕೂಡ ಅಪಾರ. ಅರ್ಜುನ್ ಜನ್ಯ ಅವರು ಮೂರು ವರ್ಷಗಳಿಂದ ನಮ್ಮ ಚಿತ್ರಕ್ಕಾಗಿ ಪಟ್ಟಿರುವ ಶ್ರಮ ಅಷ್ಟಿಷ್ಟಲ್ಲ. ಅವರ ಶ್ರಮ ಸಾರ್ಥಕ ಆಗಿದೆ. ಇನ್ನೂ, ನಮ್ಮ ಚಿತ್ರವನ್ನು ಕರ್ನಾಟಕದಲ್ಲಿ ಕೆ.ವಿ.ಎನ್ ಸಂಸ್ಥೆ ವಿತರಣೆ ಮಾಡುತ್ತಿದೆ. ತಮಿಳುನಾಡು, ಆಂದ್ರಪ್ರದೇಶ ಹಾಗೂ ಕೇರಳದಲ್ಲೂ ಜನಪ್ರಿಯ ಸಂಸ್ಥೆಗಳು ವಿತರಣೆ ಮಾಡುತ್ತಿದೆ. ಉತ್ತರ ಭಾರತದಲ್ಲಿ ಜೀ ಸ್ಟುಡಿಯೋಸ್ ವಿತರಣೆ ಮಾಡುತ್ತಿದ್ದು, ಸಿನಿಮಾದ ಸ್ಯಾಟಲೈಟ್ ರೈಟ್ಸ್ ಕೂಡ ಅದೇ ಜೀಸಂಸ್ಥೆ ತೆಗೆದುಕೊಂಡಿದೆ. ಅವರೆಲ್ಲರಿಗೂ ನಾನು ಆಬಾರಿ ಎಂದರು ನಿರ್ಮಾಪಕ ರಮೇಶ್ ರೆಡ್ಡಿ.

ಅರ್ಜುನ್ ಜನ್ಯ ಅವರು ಮೊದಲು ಕಥೆ ನನಗೆ ಹೇಳಿದ್ದು. ಕಥೆ ಹೇಳಿದ ಹಾಗೆ, ಅದಕ್ಕಿಂತ ಚೆನ್ನಾಗಿ ಸಿನಿಮಾ ಮಾಡಿದ್ದಾರೆ. ರಮೇಶ್ ರೆಡ್ಡಿ ಅವರು ಯಾವುದೇ ಕೊರತೆ ಬಾರದ ಹಾಗೆ ಸಿನಿಮಾ ಮಾಡಿದ್ದಾರೆ. ಇದು ಕೇವಲ ನನ್ನ ಸಿನಿಮಾ ಮಾತ್ರ ಅಲ್ಲ. ನಮ್ಮ ಸಿನಿಮಾ. ಉಪೇಂದ್ರ, ರಾಜ್ ಬಿ ಶೆಟ್ಟಿ ಅವರ ಅಭಿನಯ ಹಾಗೂ ಸತ್ಯ ಹೆಗಡೆ ಅವರ ಛಾಯಾಗ್ರಹಣ ಚೆನ್ನಾಗಿದೆ. ಇದೊಂದು ಜೀವನದ ಮೌಲ್ಯವನ್ನು ತಿಳಿಸುವ ಚಿತ್ರ ಎಂದರು ನಟ ಶಿವರಾಜಕುಮಾರ್.

# ಕನ್ನಡ ಸಿನಿಮಾ ರಕ್ಕಿಯ ಫಸ್ಟ್ ಡ್ರಾಪ್ ಸ್ಟೈಲಿಷ್ ಆಗಿ ಬಿಡುಗಡೆ



ಬಹು ನಿರೀಕ್ಷಿತ ಕನ್ನಡ ಸಿನಿಮಾ ರಕ್ಕಿಯ ಫಸ್ಟ್ ಡ್ರಾಪ್ ಅಧಿಕೃತವಾಗಿ ಬಿಡುಗಡೆಗೊಂಡಿದ್ದು, ಎಲ್ಲಾ ಪ್ಲಾಟ್‌ಫಾರ್ಮ್‌ಗಳಲ್ಲಿ ಸ್ಟೈಲಿಷ್ ಬಜ್ ಸೃಷ್ಟಿಸಿದೆ. ಅಶ್ವಿನಿ ಪುನೀತ್ ರಾಜ್‌ಕುಮಾರ್ ಅವರ ಆಶೀರ್ವಾದದೊಂದಿಗೆ ರೂಪುಗೊಂಡಿರುವ ರಕ್ಕಿ ಚಿತ್ರವನ್ನು SNR ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಸುರೇಶ್ ಸಾಲಿಗ್ರಾಮ ನಿರ್ಮಾಣ ಮಾಡಿದ್ದು, ವೆಂಕಟ್ ಭಾರದ್ವಾಜ್ ನಿರ್ದೇಶನ ಮಾಡಿದ್ದಾರೆ.

ಚಿತ್ರತಂಡ ಇತ್ತೀಚೆಗೆ ಬಿಡುಗಡೆ ಮಾಡಿದ ರಗಡೋ ರಕ್ಕಿ ಎಂಬ ಹೈ– ಎನರ್ಜಿ ಹುಕ್ ಸಿಗ್ನೇಚರ್ ಸ್ಟೆಪ್ ತನ್ನ ಹೊಸತನ ಮತ್ತು ಮಾಸ್ ಅಪೀಲ್‌ನಿಂದ ಗಮನ ಸೆಳೆದಿದೆ. ನೃತ್ಯ ನಿರ್ದೇಶಕ ಕಂಬಿ ರಾಜು ಅವರ ಕೊರಿಯೋಗ್ರಫಿಯಲ್ಲಿ ಮೂಡಿಬಂದ ಈ ವಿಶಿಷ್ಟ ಸ್ಟೆಪ್ ಅನ್ನು ಹೀರೋ ರಕ್ಕಿ ಸುರೇಶ್ ಉತ್ತಮವಾಗಿ ಪ್ರದರ್ಶಿಸಿದ್ದು, ಹೊಸ ನಾಯಕನ ಆತ್ಮವಿಶ್ವಾಸಭರಿತ ಪರಿಚಯಕ್ಕೆ ಸಾಕ್ಷಿಯಾಗಿದೆ.

ಚಿತ್ರದ ಎಲ್ಲಾ ಟಾಕಿ ಭಾಗಗಳ ಚಿತ್ರೀಕರಣ ಪೂರ್ಣಗೊಂಡಿದ್ದು, ಪ್ರಸ್ತುತ ಡಬ್ಬಿಂಗ್ ಹಂತಕ್ಕೆ ಚಿತ್ರ ಪ್ರವೇಶಿಸಿದೆ. ಶೀಘ್ರದಲ್ಲೇ ಬೆಂಗಳೂರು ಹೊರಗೆ ತೆರಳಿ, ಚಿತ್ರದ ಎರಡು ಪ್ರಮುಖ ಹಾಡುಗಳ ಚಿತ್ರೀಕರಣ ನಡೆಸಲು ತಂಡ ಸಜ್ಜಾಗಿದೆ. ಈ ಹಾಡುಗಳು ಚಿತ್ರದ ಪ್ರಮುಖ ಹೈಲೈಟ್‌ಗಳಾಗಿರುವ ನಿರೀಕ್ಷೆಯಿದೆ.

ರಕ್ಕಿ ಒಂದು ಪಕ್ಕಾ ಎಂಟರ್‌ಟೈನ್‌ಮೆಂಟ್ ಥ್ರಿಲ್ಲರ್, ಅಪರಾಧ ಆಧಾರಿತ ಕಥಾವಸ್ತುವಿನೊಂದಿಗೆ ಬಲಿಷ್ಠ ಕಮರ್ಷಿಯಲ್ ನಿರೂಪಣೆಯನ್ನು ಹೊಂದಿದೆ. ರಕ್ಕಿ ಸುರೇಶ್ ನಾಯಕನಾಗಿ ನಟಿಸಿದ್ದು, ನಾಯಕಿಯರಾಗಿ ಆಶಿಕಾ ಸೋಮಶೇಖರ್ ಮತ್ತು ಪಲ್ಲವಿ ಮಂಜುನಾಥ್ ಅಭಿನಯಿಸಿದ್ದಾರೆ. ಜೊತೆಗೆ ಬಿ. ಸುರೇಶ್, ಸಂಪತ್ ಮೈತ್ರೇಯ, ಬಲರಾಜ್ ವಾಡಿ, ರಮೇಶ್ ಪಂಡಿತ್, ಹರಿಣಿ ಶ್ರೀಕಾಂತ್, ಹರ್ಷ ಅರ್ಜುನ್, ಡಾ. ಸುಧಾಕರ್ ಶೆಟ್ಟಿ, ಸೂರಜ್ ಕಿರಣ್ ಸೇರಿದಂತೆ ಅನೇಕ ಹಿರಿಯ ಮತ್ತು ಪ್ರತಿಭಾವಂತ ಕಲಾವಿದರು ಚಿತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.

ಚಿತ್ರದ ತಾಂತ್ರಿಕ ಬಳಗದಲ್ಲಿ ಅನುಭವಸಂಪನ್ನರು ಸೇರಿದ್ದಾರೆ: ಕಥೆ, ಚಿತ್ರಕಥೆ, ಸಂಭಾಷಣೆ ಮತ್ತು ನಿರ್ದೇಶನ: ವೆಂಕಟ್ ಭಾರದ್ವಾಜ್

ಸಂಗೀತ: ಲೋಕಿ ತವಸ್ಯ

ಛಾಯಾಗ್ರಹಣ: ಐಸಾಕ್ ಪ್ರಭಾಕರ್

ಸಂಕಲನ: ದೀಪು ಎಸ್ ಕುಮಾರ್

ಸಹ ನಿರ್ದೇಶಕ: ಲಾರೆನ್ಸ್

ಸ್ಟಂಟ್ಸ್: ಶಿವ

ನೃತ್ಯ ನಿರ್ದೇಶನ: ಕಂಬಿ ರಾಜು & ಹೈಟ್ ಮಂಜು

ಕಥಾವಸ್ತು ಮತ್ತು ಉತ್ಸಾಹಭರಿತ ಹೊಸ ಮುಖದೊಂದಿಗೆ ರಕ್ಕಿ ಕನ್ನಡ ಸಿನಿರಸಿಕರಿಗೆ ವಿಭಿನ್ನ ಅನುಭವ ನೀಡುವ ಭರವಸೆ ಮೂಡಿಸಿದೆ. ಮುಂದಿನ ದಿನಗಳಲ್ಲಿ ಚಿತ್ರದ ಇನ್ನಷ್ಟು ಅಪ್ಡೇಟ್ಸ್ ಮತ್ತು ಪ್ರಚಾರ ಸಾಮಗ್ರಿಗಳು ಬಿಡುಗಡೆಯಾಗಲಿವೆ.

# "ವೃಷಭ" ಮುನ್ನುಗ್ಗಲಿ: ಡಿಕೆಶಿ




ಮೋಹನ್‌ಲಾಲ್ ಅಭಿನಯದ 'ವೃಷಭ' ಡಿಸೆಂ2 ತೆರೆಗೆ ಬರಲಿದೆ. ತಂದೆ–ಮಗನ ನಡುವಿನ ಬಾಂಧವ್ಯದ ಎಮೋಷನಲ್ ಕಥಾಹಂದರ ಹೊಂದಿರುವ ಈ ಸಿನಿಮಾ, ಭವ್ಯತೆ ಮತ್ತು ಸಾಹಸ ದೃಶ್ಯಗಳ ಮೂಲಕ ಪ್ರೇಕ್ಷಕರನ್ನು ಮಂತ್ರಮುಗ್ಧಗೊಳಿಸಲಿದೆ.

ಸಮಾರಂಭದಲ್ಲಿ ಮಾತನಾಡಿದ ಡಿ.ಕೆ.ಶಿ ಚಿತ್ರಕ್ಕೆ ಶುಭ ಹಾರೈಸಿ ಇತ್ತೀಚೆಗೆ ಮುಂಬೈಗೆ ಹೋಗಿದ್ದಾಗ ಬಾಲಿವುಡ್ ನವರು ಕನ್ನಡ ಚಿತ್ರಗಳ ಬಗ್ಗೆ ಆಡಿದ ಉತ್ತಮ ಮಾತುಗಳನ್ನು ಕೇಳಿ ಸಂತೋಷವಾಯಿತು ಎಂದರು.

ಮಲಯಾಳಂನ ಸೂಪರ್ ಸ್ಟಾರ್ ಮೋಹನ್ ಲಾಲ್ ಮುಖ್ಯ ಭೂಮಿಕೆಯಲ್ಲಿರುವ ಈ ಚಿತ್ರದಲ್ಲಿ ಸಮರ್ಜಿತ್ ಲಂಕೇಶ್, ರಾಗಿಣಿ ದ್ವಿವೇದಿ, ನಯನ್ ಸಾರಿಕಾ, ಅಜಯ್, ನೇಹಾ ಸಕ್ಸೇನಾ, ಗರುಡ ರಾಮ್, ವಿನಯ್ ವರ್ಮಾ, ಆಲಿ, ಅಯ್ಯಪ್ಪ ಪಿ. ಶರ್ಮಾ ಮತ್ತು ಕಿಶೋರ್ ನಟಿಸಿದ್ದಾರೆ.

ಸಂಗೀತ: ಸ್ಯಾಮ್ ಸಿ.ಎಸ್.

ಧ್ವನಿ ವಿನ್ಯಾಸ: ರೇಸುಲ್ ಪೂಕುಟ್ಟಿ.

ಸಂಭಾಷಣೆ: ಎಸ್.ಆರ್.ಕೆ, ಜನಾರ್ದನ್ ಮಹರ್ಷಿ ಮತ್ತು ಕಾರ್ತಿಕ್.

ಸಾಹಸ ನಿರ್ದೇಶನ: ಪೀಟರ್ ಹೆನ್, ಸ್ಟಂಟ್ ಸಿಲ್ವಾ, ಗಣೇಶ್ ಮತ್ತು ನಿಖಿಲ್.

ಬಾಲಾಜಿ ಟೆಲಿಫಿಲ್ಮ್ಸ್ ಮತ್ತು ಕನೆಕ್ಟ್ ಮೀಡಿಯಾ ಪ್ರೆಸೆಂಟ್ಸ್ ಅಡಿಯಲ್ಲಿ, ಅಭಿಷೇಕ್ ಎಸ್. ವ್ಯಾಸ್ ಸ್ಟುಡಿಯೋಸ್ ಸಹಯೋಗದೊಂದಿಗೆ ಈ ಸಿನಿಮಾ ಮೂಡಿಬರುತ್ತಿದೆ. ಶೋಭಾ ಕಪೂರ್, ಏಕ್ತಾ ಆರ್. ಕಪೂರ್, ಸಿ.ಕೆ. ಪದ್ಮಕುಮಾರ್, ವರುಣ್ ಮಾಥುರ್, ಸೌರಭ್ ಮಿಶ್ರಾ, ಅಭಿಷೇಕ್ ಎಸ್. ವ್ಯಾಸ್, ಪ್ರವೀರ್ ಸಿಂಗ್, ವಿಶಾಲ್ ಗುರ್ನಾನಿ ಮತ್ತು ಜೂಹಿ ಪರೇಖ್ ಮೆಹ್ತಾ ಅವರು ಈ ಚಿತ್ರವನ್ನು ನಿರ್ಮಿಸಿದ್ದಾರೆ. ವಿಮಲ್ ಲಹೋಟಿ ಅವರು ಸಹ–ನಿರ್ಮಾಪಕರಾಗಿ ಕಾರ್ಯನಿರ್ವಹಿಸಿದ್ದಾರೆ.

# ಲ್ಯಾಂಡ್ ಲಾರ್ಡ್ ಚಿತ್ರದ ನಿಂಗವ್ವ ನಿಂಗವ್ವ ಹಾಡು ಬಿಡುಗಡೆ



ಸಾರಥಿ ಫಿಲಂಸ್ ಲಾಂಛನದಲ್ಲಿ ಕೆ.ವಿ.ಸತ್ಯಪ್ರಕಾಶ್ – ಹೇಮಂತ್ ಗೌಡ ಕೆ.ಎಸ್ ನಿರ್ಮಿಸಿರುವ, ಜಡೇಶ್ ಕೆ.ಹಂಪಿ ನಿರ್ದೇಶನದ ಹಾಗೂ ದುನಿಯಾ ವಿಜಯ್, ರಚಿತರಾಮ್ ಅಭಿನಯದ 'ಲ್ಯಾಂಡ್ ಲಾರ್ಡ್' ಚಿತ್ರಕ್ಕಾಗಿ ಯೋಗರಾಜ್ ಭಟ್ ಅವರು ಬರೆದಿರುವ, ಅಜನೀಶ್ ಲೋಕನಾಥ್ ಸಂಗೀತ ನೀಡಿರುವ "ನಿಂಗವ್ವ ನಿಂಗವ್ವ" ಹಾಡು ಬಿಡುಗಡೆಯಾಗಿದೆ. ವಿಜಯ್ ಪ್ರಕಾಶ್ – ಅನನ್ಯ ಭಟ್ ಕಂಠಸಿರಿಯಲ್ಲಿ ಮೂಡಿಬಂದಿರುವ ಈ ಹಾಡಿಗೆ ಭೂಷಣ್ ನೃತ್ಯ ಸಂಯೋಜನೆ ಮಾಡಿದ್ದಾರೆ. ದುನಿಯಾ ವಿಜಯ್ – ರಚಿತರಾಮ್ ಅಭಿನಯಕ್ಕೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಆನಂದ್ ಆಡಿಯೋ ಯೂಟ್ಯೂಬ್ ಚಾನಲ್ ನಲ್ಲಿ ಬಿಡುಗಡೆಯಾಗಿರುವ ಈ ಹಾಡಿಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ.

ಸ್ಯಾಂಡಲ್ ವುಡ್ ನ ತಾರಾ ದಂಪತಿಗಳಾದ "ನೆನಪಿರಲಿ" ಪ್ರೇಮ್ – ಜ್ಯೋತಿ, ಡಾರ್ಲಿಂಗ್ ಕೃಷ್ಣ – ಮಿಲನ ನಾಗರಾಜ್ ಹಾಗೂ ತರುಣ್ ಸುಧೀರ್ – ಸೋನಾಲ್ ಅವರಿಂದ "ನಿಂಗವ್ವ ನಿಂಗವ್ವ" ಹಾಡು ಬಿಡುಗಡೆಯಾಯಿತು. ಹಾಡು ಬಿಡುಗಡೆ ಮಾಡಿ ಮಾತನಾಡಿದ ದಂಪತಿಗಳು ಯೋಗರಾಜ್ ಭಟ್ ಅವರ ಸಾಹಿತ್ಯ, ಅಜನೀಶ್ ಲೋಕನಾಥ್ ಸಂಗೀತ ಸಂಯೋಜನೆ, ವಿಜಯ್ ಪ್ರಕಾಶ್ ಗಾಯನ ಹಾಗೂ ವಿಶೇಷವಾಗಿ ದುನಿಯಾ ವಿಜಯ್, ರಚಿತರಾಮ್ ಅವರ ಅಭಿನಯದ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದರು. ಸ್ವಾಮಿ ಅವರ ಛಾಯಾಗ್ರಹಣ ಪೈಟಿಂಗ್ ಇದ್ದ ಹಾಗೆ ಇದೆ ಎಂದು ಬಣ್ಣಿಸಿದರು. ನಿರ್ದೇಶಕರ ಕಾರ್ಯವೈಖರಿ ಚೆನ್ನಾಗಿದೆ ಎಂದು ತಿಳಿಸಿ, ನಿರ್ಮಾಪಕರಿಗೆ ಶುಭವನ್ನು ಕೋರಿದರು. ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ಆನಂತರ ದಂಪತಿಗಳಿಗೆ ದುನಿಯಾ ವಿಜಯ್ ಹಾಗೂ ರಚಿತರಾಮ್ ಬಾಗಿನ ನೀಡಿ ಸನ್ಮಾನಿಸಿದರು. ನೀನಾಸಂ ಸತೀಶ್ ಹಾಗೂ ಗುರು ದೇಶಪಾಂಡೆ ಅತಿಥಿಗಳಾಗಿ ಆಗಮಿಸಿದ್ದರು.

ಈ ಸಂದರ್ಭದ ಸಂತೋಷವನ್ನು ನೋಡಿ ಮಾತುಗಳೆ ಹೊರಡುತ್ತಿಲ್ಲ. ಮೊದಲಿಗೆ ಹಾಡು ಬಿಡುಗಡೆ ಮಾಡಿ ಕೊಟ್ಟ ದಂಪತಿಗಳಿಗೆ ಧನ್ಯವಾದ. ನನ್ನ ಹಿಟ್ ಸಾಂಗ್ ಗಳ ಲಿಸ್ಟ್ ನಲ್ಲಿ ಅಧಿಕ ಹಾಡುಗಳನ್ನು ಬರೆದಿರುವುದು ಯೋಗರಾಜ್ ಭಟ್ ಅವರು. ಈ ಹಾಡನ್ನು ಅದ್ಭುತವಾಗಿ ಬರೆದಿದ್ದಾರೆ. ಅಷ್ಟೇ ಚೆನ್ನಾಗಿ ವಿಜಯ್ ಪ್ರಕಾಶ್ ಹಾಡಿದ್ದಾರೆ. ಅಜನೀಶ್ ಲೋಕನಾಥ್ ಸಂಗೀತ ಸಂಯೋಜಿಸಿದ್ದಾರೆ. ಭೂಷಣ್ ಅವರ ನೃತ್ಯ ನಿರ್ದೇಶನ ಕೂಡ ಉತ್ತಮವಾಗಿದೆ. ಸಾಮಾನ್ಯವಾಗಿ ನಾಯಕಿಯರು ಈ ವಯಸ್ಸಿನ ಪಾತ್ರ ಒಪ್ಪಿಕೊಳ್ಳುವುದು ಕಡಿಮೆ. ರಚಿತರಾಮ್ ಅವರು ಒಪ್ಪಿಕೊಂಡು ಈ ಪಾತ್ರ ಮಾಡಿದ್ದಾರೆ. ನನಗೂ ಕೂಡ ಈ ಹಾಡು ಬಿಡುಗಡೆ ಆಗುವವರೆಗೂ ನನ್ನ ಪಾತ್ರದ ಬಗ್ಗೆ ಎಲ್ಲರೂ ಏನು ಹೇಳಬಹುದು ಎಂಬ ಕುತೂಹಲವಿತ್ತು. ಈಗ ಎಲ್ಲರೂ ಪ್ರಶಂಸೆ ನೀಡುತ್ತಿದ್ದಾರೆ. ಒಳ್ಳೆಯ ಕಥೆ ಮಾಡಿಕೊಂಡಿರುವ ನಿರ್ದೇಶಕ ಜಡೇಶ್ ಕೆ ಹಂಪಿ ಅವರಿಗೆ ಹಾಗೂ ಯಾವುದೇ ಕೊರತೆ ಬಾರದ ಹಾಗೆ ನಿರ್ಮಾಣ ಮಾಡಿರುವ ನಿರ್ಮಾಪಕರಿಗೆ ಅಭಿನಂದನೆಗಳನ್ನು ತಿಳಿಸಿದ ನಾಯಕ ವಿಜಯ್ ಕುಮಾರ್ ಜನವರಿ 23 ರಂದು ನಮ್ಮ ಚಿತ್ರ ಬಿಡುಗಡೆಯಾಗುತ್ತಿದೆ ನೋಡಿ ಪ್ರೋತ್ಸಾಹ ನೀಡಿ ಎಂದರು.

ಈ ಹಾಡು ಉತ್ತಮವಾಗಿ ಮೂಡಿಬಂದಿದೆ. ಈ ಹಾಡಿನ ಚಿತ್ರೀಕರಣ ಸಮಯದಿಂದಲೂ ಯಾವಾಗ ಬಿಡುಗಡೆಯಾಗಬಹುದೆಂದು ಕಾಯುತ್ತಿದೆ. ಸ್ವಾಮಿ ಅವರ ಛಾಯಾಗ್ರಹಣ, ಯೋಗರಾಜ್ ಭಟ್ ಅವರ ಸಾಹಿತ್ಯ, ಅಜನೀಶ್ ಲೋಕನಾಥ್ ಅವರ ಸಂಗೀತ ಹಾಗು ವಿಜಯ್ ಪ್ರಕಾಶ್ ಅವರ ಗಾಯನ ಎಲ್ಲವೂ ಚೆನ್ನಾಗಿದೆ. ಇನ್ನೂ, ವಿಜಯ್ ಸರ್ ರಾಚಯ್ಯ ಪಾತ್ರದಲ್ಲಿ, ನಾನು ನಿಂಗವ್ವ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇವೆ. ಈ ಹಾಡಲ್ಲಿ ನಮ್ಮಿಬ್ಬರ ಅಭಿನಯಕ್ಕೆ ಎಲ್ಲರೂ ನೀಡುತ್ತಿರುವ ಮೆಚ್ಚುಗೆಗೆ ಮನ ತುಂಬಿ ಬಂದಿದೆ ಎಂದು ನಾಯಕಿ ರಚಿತರಾಮ್ ತಿಳಿಸಿದರು.

ಆಗಮಿಸಿದ ಅತಿಥಿಗಳಿಗೆ ಹಾಗೂ ಚಿತ್ರತಂಡದವರಿಗೆ ಧನ್ಯವಾದ ತಿಳಿಸಿ ಮಾತನಾಡಿದ ನಿರ್ದೇಶಕ ಜಡೇಶ್ ಕೆ ಹಂಪಿ, ನಾನು ಚಿತ್ರರಂಗಕ್ಕೆ ಪ್ರವೇಶ ಮಾಡಲು ಕಾರಣರಾದ ಗುರು ದೇಶಪಾಂಡೆ ಹಾಗು ತರುಣ್ ಸುಧೀರ್ ಇಲ್ಲಿರುವುದು ಖುಷಿಯಾಗಿದೆ. ಇನ್ನೂ, ಈ "ನಿಂಗವ್ವ" ಎಂಬ ಅದ್ಭುತ ಹಾಡನ್ನು ಯೋಗರಾಜ್ ಭಟ್ ಅವರು ಬರೆದುಕೊಟ್ಟಿದ್ದಾರೆ. ವಿಜಿ ಸರ್ ಹಾಗು ಯೋಗರಾಜ್ ಭಟ್ ಅವರ ಕಾಂಬಿನೇಶನ್ ನಲ್ಲಿ ಬಂದಿರುವ ಎಲ್ಲಾ ಹಾಡುಗಳು ಸೂಪರ್ ಹಿಟ್ ಆಗಿದೆ. ಈಗ ಆ ಸಾಲಿಗೆ "ನಿಂಗವ್ವ" ಕೂಡ ಸೇರಲಿದೆ. ನನ್ನ ಹಿಂದಿನ ಎರಡು ಚಿತ್ರಗಳಿಗೂ ಸಂಗೀತ ಸಂಯೋಜಿಸಿದ್ದ ಅಜನೀಶ್ ಅವರೆ ಈ ಚಿತ್ರಕ್ಕೂ ಸಂಗೀತ ನೀಡಿದ್ದಾರೆ. ವಿಜಯ್ ಪ್ರಕಾಶ್ ಹಾಗೂ ಅನನ್ಯ ಭಟ್ ಸೊಗಸಾಗಿ ಹಾಡಿದ್ದಾರೆ. ನಿರ್ಮಾಪಕರು ಯಾವುದೇ ಕೊರತೆ ಬಾರದ ಹಾಗೆ ನಿರ್ಮಾಣ ಮಾಡಿದ್ದಾರೆ. ಚಿತ್ರದ ಎಲ್ಲಾ ಹಾಡುಗಳು ತುಂಬಾ ಚೆನ್ನಾಗಿ ಮೂಡಿಬಂದಿದೆ ಎಂದರು.

ಜಡೇಶ್ ಅವರು ಮೊದಲು ಕಥೆ ಹೇಳಿದಾಗ ನಾನು ಸದ್ಯಕ್ಕೆ ಸಿನಿಮಾ ಮಾಡುವುದಿಲ್ಲ ಎಂದು ಹೇಳಿದ್ದೆ. ಆದರೆ ಅವರು ನಾವು ನಿರ್ಮಾಣ ಮಾಡುವವರೆಗೂ ಬಿಡಲಿಲ್ಲ. ನನ್ನ ಮಗ ಹೇಮಂತ್ ಗೌಡ ಈ ಚಿತ್ರದ ನಿರ್ಮಾಪಕರು. ನಾನು ಅವರ ಜೊತೆ ಇದ್ದೀನಿ. ಚಿತ್ರ ನಿರ್ಮಾಣ ಮಾಡಲು ಅನೇಕ ಜನ ಸ್ನೇಹಿತರು ಸಾಥ್ ನೀಡಿದ್ದಾರೆ. ಅವರಿಗೆ ಹಾಗೂ ನನ್ನ ಇಡೀ ಚಿತ್ರತಂಡಕ್ಕೆ ನಾನು ಧನ್ಯವಾದ ತಿಳಿಸುತ್ತೇನೆ ಎಂದರು ನಿರ್ಮಾಪಕ ಕೆ.ವಿ.ಸತ್ಯಪ್ರಕಾಶ್. ಹೇಮಂತ್ ಗೌಡ ಅವರು ಸಹ ಜನವರಿ 23 ರಂದು ತೆರೆಗೆ ಬರುತ್ತಿರುವ ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು.

# ಹೊಸವರ್ಷಕ್ಕೆ ಬಂತು "ಕ್ಯಾಲೆಂಡರ್" ಹಾಡು



ಈ ಹಿಂದೆ "ಸ್ವಾರ್ಥ ರತ್ನ" ಸೇರಿದಂತೆ ಎರಡು ಚಿತ್ರಗಳಲ್ಲಿ ನಟಿಸಿದ್ದ ಆದರ್ಶ ಗುಂಡುರಾಜ್ ಸದ್ಯ "ಕ್ಯಾಲೆಂಡರ್" ಚಿತ್ರದ ನಾಯಕನಾಗಿ ನಟಿಸಿದ್ದಾರೆ. ಈ ಚಿತ್ರದ "ನಾನ್ಯಾರು" ಎಂಬ ಹಾಡು ಇತ್ತೀಚೆಗೆ ಆನಂದ್ ಆಡಿಯೋ ಯೂಟ್ಯೂಬ್ ಚಾನೆಲ್ ನಲ್ಲಿ ಬಿಡುಗಡೆಯಾಗಿದೆ. ಹಾಡಿಗೆ ಮೆಚ್ಚುಗೆ ವ್ಯಕ್ತವಾಗಿ, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಇತ್ತೀಚೆಗೆ ಹಾಡು ಬಿಡುಗಡೆ ಸಮಾರಂಭ ಅದ್ದೂರಿಯಾಗಿ ನೆರವೇರಿತು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

"ಸ್ವಾರ್ಥ ರತ್ನ" ನಂತರ ಈ ಚಿತ್ರದ ನಾಯಕನಾಗಿ ಅಭಿನಯಿಸಿದ್ದೇನೆ. ಇದು ನಾನು ನಾಯಕನಾಗಿ ನಟಿಸಿರುವ ಮೂರನೇ ಚಿತ್ರ. ವರ್ಷಗಳು ಕಳೆಯುತ್ತಿರುತ್ತದೆ. ಆದರೆ ದಿನವನ್ನು ಗುರುತಿಸಲು ನಮಗೆ "ಕ್ಯಾಲೆಂಡರ್" ಬಹಳ ಸಹಾಯಕಾರಿ. ಶೀರ್ಷಿಕೆಗೂ ಹಾಗೂ ಚಿತ್ರಕ್ಕೂ ಸಂಬಂಧವಿದೆ. ನಾನೇ ಚಿತ್ರಕ್ಕೆ ಕಥೆ ಬರೆದು ನಿರ್ಮಾಣ ಮಾಡಿದ್ದೇನೆ. ಹೆಣ್ಣುಮಕ್ಕಳಿಗಂತೂ ಈ ಕಥೆ ಬಹಳ ಹತ್ತಿರವಾಗುತ್ತದೆ. ಈಗಾಗಲೇ ಚಿತ್ರಕ್ಕೆ ಚಿತ್ರೀಕರಣ ಮುಕ್ತಾಯವಾಗಿದ್ದು, ಪೋಸ್ಟ್ ಪ್ರೊಡಕ್ಷನ್ ನಲ್ಲಿ ಬ್ಯುಸಿಯಾಗಿದೆ. ಇಂದು "ನಾನ್ಯಾರೊ" ಎಂಬ ಮೊದಲ ಹಾಡಿನ ಅನಾವರಣವಾಗಿದೆ. ಸಂಜಯ್ ವೈ ಬಿ ಎಚ್ ಹಾಗೂ ನವೀನ್ ಶಕ್ತಿ ಈ ಹಾಡನ್ನು ಬರೆದಿದ್ದು, ನನ್ನ ಮಗಳು ಅನುಷ್ಕಾ ಕಾಗಿನೆರೆ ಈ ಹಾಡನ್ನು ಹಾಡಿದ್ದಾರೆ. ಹೃತಿಕ್ ಪೂಜಾರಿ ಹಾಗೂ ಸಂಜಯ್ ಕೂಡ ಗಾಯನಕ್ಕೆ ಜೊತೆಯಾಗಿದ್ದಾರೆ. ಸುನಾದ್ ಗೌತಮ್ ಸಂಗೀತ ನೀಡಿದ್ದಾರೆ. ಆನಂದ್ ಆಡಿಯೋ ಯೂಟ್ಯೂಬ್ ನಲ್ಲಿ ಈ ಹಾಡು ಲಭ್ಯವಿದೆ. ಎಂದು ನಾಯಕ ಹಾಗೂ ನಿರ್ಮಾಪಕ ಆದರ್ಶ ಗುಂಡುರಾಜ್ ತಿಳಿಸಿದರು.

ನಾನು ಮೂಲತಃ ರಂಗಭೂಮಿಯವವನು. 5000ಕ್ಕೂ ಅಧಿಕ ಬೀದಿ ನಾಟಕಗಳನ್ನು ಮಾಡಿದ್ದೇನೆ. ನಿರ್ದೇಶಕನಾಗಿ ಇದು ಮೊದಲ ಚಿತ್ರ. "ಕ್ಯಾಲೆಂಡರ್" ನಲ್ಲಿ ಎಲ್ಲರ ಮನಸ್ಸಿಗೂ ಹತ್ತಿರವಾಗುವ ಕಥೆಯನ್ನು ಆದರ್ಶ ಗುಂಡುರಾಜ್ ಬರೆದಿದ್ದಾರೆ . ರಮೇಶ್ ಕೊಯಿರಾ ಅವರ ಛಾಯಾಗ್ರಹಣ ಹಾಗೂ ಸುನಾದ್ ಗೌತಮ್ ಸಂಗೀತ ನಿರ್ದೇಶನವಿರುವ ಈ ಚಿತ್ರದ ನಾಯಕನಾಗಿ ಆದರ್ಶ ಗುಂಡುರಾಜ್ ಅಭಿನಯಿಸಿದ್ದಾರೆ. ಸುಶ್ಮಿತಾ ಹಾಗೂ ನಿವಿಷ್ಕ ಪಾಟೀಲ್ ನಾಯಕಿಯರು. ವಿಶೇಷ ಪಾತ್ರದಲ್ಲಿ ಕನಸಿನ ರಾಣಿ ಮಾಲಾಶ್ರೀ ಕಾಣಿಸಿಕೊಂಡಿದ್ದಾರೆ. ರಮೇಶ್ ಇಂದಿರಾ, ಪ್ರಮೋದ್ ಶೆಟ್ಟಿ, ಪ್ರಕಾಶ್ ತುಮ್ಮಿನಾಡು, ಸುಚೇಂದ್ರ ಪ್ರಸಾದ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ಇಂದು ಮೊದಲ ಹಾಡು ಬಿಡುಗಡೆಯಾಗಿದೆ.

ಸದ್ಯದಲ್ಲೇ ಚಿತ್ರ ತೆರೆಗೆ ಬರಲಿದೆ ಎಂದರು ನಿರ್ದೇಶಕ ನವೀನ್ ಶಕ್ತಿ.

ಹಾಡಿನ ಬಗ್ಗೆ ಸಂಗೀತ ನಿರ್ದೇಶಕ ಸುನಾದ್ ಗೌತಮ್ ಹಾಗೂ ಗಾಯಕಿ ಅನುಷ್ಕಾ ಮಾತನಾಡಿದರು. ನಾಯಕಿಯರಾದ ಸುಶ್ಮಿತ ಹಾಗೂ ನಿವಿಷ್ಕಾ ಪಾಟೀಲ್ ತಮ್ಮ ಪಾತ್ರದ ಬಗ್ಗೆ ಹೇಳಿಕೊಂಡರು.




ಭರತನಾಟ್ಯವಿದುಷಿ ಹಾಗೂ ಚಲನಚಿತ್ರ ಪೋಷಕ ಕಲಾವಿದೆ ಮಾನಸಿ ಸುಧೀರ್ ಅವರಿಗೆಮಾಜಿ ಸಚಿವ ಜಯಪ್ರಕಾಶ್ ಹೆಗ್ಡೆ ಅವರು ಅಲೆಯೂರಿನಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಿದರು. ಪತಿ ಸುಧೀರ್ ಉಪಸ್ಥಿತರಿದ್ದರು.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,